# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ -02 ಸಂಚಿಕೆ -266 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ-874/2024-2026 | ಚಿತ್ರದುರ್ಗ | ದಿನಾಂಕ:16-05-2025 ಶುಕ್ರವಾರ | ಪುಟ: 4 | ಬೆಲೆ : ರೂ.2-00
Volume - 02 Issue - 266 | RNI No: KARKAN/2023/88462 | KA/SK/CTA-874/2024-2026 | Chitradurga | Date: 16-05-2025 Friday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಶಕ್ತಿ ಯೋಜನೆ: ಕೆಎಸ್ಸಾರ್ಟಿಸಿಗೆ ರೂ.177.33 ಕೋಟಿ ಆದಾಯ 2

ಎಲ್ಲಾ ವರ್ಗದವರಿಗೆ ಸಾಮಾಜಿಕ ನ್ಯಾಯ ಒದಗಿಸುವುದು ಸರ್ಕಾರದ ಉದ್ದೇಶ 3

ಜೂನ್ ತಿಂಗಳಲ್ಲಿ ಚಳ್ಳಕೆರೆಗೆ ಸಿದ್ದರಾಮಯ್ಯ ಆಗಮನ: ಶಾಸಕ ರಘುಮೂರ್ತಿ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ಪ್ರವಾಸ ಕಾರ್ಯಕ್ರಮ

» ಚಿತ್ರದುರ್ಗ

ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ಅವರು ಮೇ. 17 ರಂದು ಚಿತ್ರದುರ್ಗ ಜಿಲ್ಲಾ ಪ್ರವಾಸ ಕಾರ್ಯಕ್ರಮ ಹಮ್ಮಿಕೊಂಡಿದ್ದಾರೆ. ಸಚಿವ ವಿ. ಸೋಮಣ್ಣ ಅವರು ಅಂದು ಬೆಳಿಗ್ಗೆ ಬೆಂಗಳೂರಿನಿಂದ ಹೊರಟು, ಬೆಳಿಗ್ಗೆ 11 ಗಂಟೆಗೆ ಚಿತ್ರದುರ್ಗ ನಗರಕ್ಕೆ ಆಗಮಿಸುವರು. ಬಳಿಕ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ತುಮಕೂರು-ಚಿತ್ರದುರ್ಗ-ದಾವಣಗೆರೆ ನೂತನ ರೈಲ್ವೆ ಮಾರ್ಗದ ಕಾಮಗಾರಿಯ ಪ್ರಗತಿ ಕುರಿತಂತೆ ಪರಿಶೀಲನಾ ಸಭೆ ನಡೆಸುವರು. ನಂತರ ರೈಲ್ವೆ ಯೋಜನೆ ಕುರಿತಂತೆ ಸ್ಥಳ ಪರಿವೀಕ್ಷಣೆ ನಡೆಸುವರು. ಮಧ್ಯಾಹ್ನ 02 ಗಂಟೆಗೆ ಸಚಿವರು ಚಿಕ್ಕಮಗಳೂರಿಗೆ ಪ್ರಯಾಣ ಬೆಳೆಸುವರು ಎಂದು ರೈಲ್ವೆ ಖಾತೆ ರಾಜ್ಯ ಸಚಿವರ ಕಾರ್ಯಾಲಯದ ಸೆಕ್ಷನ್ ಅಧಿಕಾರಿಗಳು ತಿಳಿಸಿದ್ದಾರೆ.

### ಎಸ್‌ಜೆಎಂ ಪಾಲಿಟೆಕ್ನಿಕ್ ನಲ್ಲಿ ಪ್ರವೇಶ ಪ್ರಾರಂಭ

» ಚಿತ್ರದುರ್ಗ

ಚಿತ್ರದುರ್ಗ ನಗರದ ಎಸ್ ಜೆ ಎಂ ಪಾಲಿಟೆಕ್ನಿಕ್ ನಲ್ಲಿ ಪ್ರವೇಶಗಳು ಆರಂಭವಾಗಿದ್ದು. ಎಸ್ ಎಸ್ ಎಲ್ ಸಿ ,ಪಿಯುಸಿ ಹಾಗೂ ಐಟಿಐ ಪಾಸಾದವರು ಕಾಲೇಜಿಗೆ ಬಂದು, ಮಾಹಿತಿ ಪಡೆದು ಪ್ರವೇಶಾತಿಯನ್ನು ಪಡೆದುಕೊಳ್ಳಲು ಪ್ರಾಚಾರ್ಯ ಎಸ್. ವಿ. ರವಿಶಂಕರ್ ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ. ಸಿವಿಲ್, ಮೆಕಾನಿಕಲ್, ಆಟೋಮೊಬೈಲ್, ಎಲೆಕ್ಟ್ರಾನಿಕ್ ಅಂಡ್ ಕಮ್ಯೂನಿಕೇಶನ್ ಹಾಗೂ ಕಂಪ್ಯೂಟರ್ ಸೈನ್ಸ್ ವಿಭಾಗಗಳು ಇದ್ದು..ನುರಿತ ಬೋಧಕರು, ಉತ್ತಮ ಪ್ರಯೋಗಾಲಯ, ಸುಸಜ್ಜಿತ ಗ್ರಂಥಾಲಯ ,ವಿಶಾಲವಾದ ಹಸಿರು, ನೆರಳಿರುವ ಮೈದಾನ, ವಾಹನ ಸೌಕರ್ಯ, ಬಾಲಕ -ಬಾಲಕಿಯರಿಗೆ ಬಿಸಿಎಂ ವಿದ್ಯಾರ್ಥಿನಿಲಯ ಹತ್ತಿರದಲ್ಲಿರುವುದು, ಅಂತಿಮ ವರ್ಷದ ವಿದ್ಯಾರ್ಥಿಗಳಿಗೆ ಕಂಪನಿಗಳಲ್ಲಿ ಸ್ಟೈಫಂಡ್ ಸಹಿತ ಇಂಟರ್ಶಿಪ್ ಕೋರ್ಸ್ಗೆ ಅವಕಾಶ . ಕ್ಯಾಂಪಸ್ ಸಂದರ್ಶನ ಹಾಗೂ ನೇರ ನೇಮಕಾತಿ ಇದೆ. ಡಿಪ್ಲೋಮಾ ನಂತರ ನೇರವಾಗಿ ಮೂರನೇ ಸೆಮ್ಗೆ ಇಂಜಿನಿಯರಿಂಗ್ ಪ್ರವೇಶ ಪಡೆಯಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಈ ಕೆಳಕಂಡ ನಂಬರ್ ಗಳಲ್ಲಿ ಸಂಪರ್ಕಿಸಬಹುದಾಗಿದೆ. 9741739159,,9449973823,, 9481416939 7760106505,, 9448423338

### ಮೇ.16ರಂದು ಉನ್ನತ ಶಿಕ್ಷಣ ಕಾರ್ಯಾಗಾರ

» ಚಿತ್ರದುರ್ಗ

ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರಿನ ಕಾಲೇಜು ಮಾಹಿತಿ ಸಹಯೋಗದಲ್ಲಿ ಇದೇ ಮೇ.16ರಂದು ಬೆಳಿಗ್ಗೆ 11ಕ್ಕೆ ಚಿತ್ರದುರ್ಗ ನಗರದ ಜಿಲ್ಲಾ ಸ್ಕೌಟ್ಸ್ ಮತ್ತು ಗೈಡ್ಸ್ ಕಚೇರಿಯಲ್ಲಿ "ಉನ್ನತ ಶಿಕ್ಷಣ ಮಾಹಿತಿ ಕಾರ್ಯಾಗಾರ" ಹಮ್ಮಿಕೊಳ್ಳಲಾಗಿದೆ. ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಉದ್ಘಾಟನೆ ನೆರವೇರಿಸುವರು. ಮುಖ್ಯ ಅತಿಥಿಗಳಾಗಿ ಪದವಿಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಆರ್.ಪುಟ್ಟಸ್ವಾಮಿ, ಡಯಟ್ ಉಪನಿರ್ದೇಶಕ ನಾಸಿರುದ್ದೀನ್, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಂ.ಆರ್.ಮಂಜುನಾಥ್ ಭಾಗವಹಿಸುವರು.

### ಡೆಂಗೀ ಇಂದು ಜಾಥಾ

» ಚಿತ್ರದುರ್ಗ

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಇದೇ ಮೇ.16ರಂದು ಬೆಳಿಗ್ಗೆ 9ಕ್ಕೆ ಚಿತ್ರದುರ್ಗ ಜಿಲ್ಲಾಸ್ಪತ್ರೆ ಆವರಣದಲ್ಲಿ ರಾಷ್ಟ್ರೀಯ ಡೆಂಗೀ ದಿನದ ಅಂಗವಾಗಿ ಜಾಥಾ ಕಾರ್ಯಕ್ರಮ ಆಯೋಜಿಸಲಾಗಿದೆ. ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅವರು ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡುವರು. ಜಾಥಾ ಕಾರ್ಯಕ್ರಮವು ಚಿತ್ರದುರ್ಗ ನಗರದ ಜಿಲ್ಲಾ ಆಸ್ಪತ್ರೆ ಆವರಣದಿಂದ ಜೋಗಿಮಟ್ಟಿ ರಸ್ತೆಯ ಮಾರ್ಗವಾಗಿ ಕರುವಿನಕಟ್ಟೆ ವೃತ್ತದಲ್ಲಿ ಮಾನವ ಸರಪಳಿ ಮಾಡಿ, ಉಜ್ಜಿನಿ ಮಠ ಮುಖಾಂತರ ರಂಗಯ್ಯನ ಬಾಗಿಲು ಮಾರ್ಗವಾಗಿ ಜಿಲ್ಲಾ ಆಸ್ಪತ್ರೆಗೆ ಅಂತ್ಯಗೊಳಿಸುವುದು. ಈ ಕಾರ್ಯಕ್ರಮದಲ್ಲಿ ಎಲ್ಲ ಕಾರ್ಯಕ್ರಮಗಳ ಅನುಷ್ಠಾನಾಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರು ಭಾಗವಹಿಸಲಿದ್ದಾರೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ತಿಳಿಸಿದ್ದಾರೆ.

ಪೊಲೀಸ್ ಕವಾಯತು ಮೈದಾನದಲ್ಲಿ ಅಪರೇಷನ್ ಅಭ್ಯಾಸ್ ನಾಗರೀಕ ಸುರಕ್ಷಾ ಅಣಕು ಪ್ರದರ್ಶನ

# ತುರ್ತು ಸಂದರ್ಭದಲ್ಲಿ ರಕ್ಷಣಾ ಕಾರ್ಯ

## ತುರ್ತು ಪರಿಸ್ಥಿತಿಗಳನ್ನು ನಿಭಾಯಿಸಲು ಸಾರ್ವಜನಿಕರಲ್ಲಿ ಅರಿವು ಅಗತ್ಯ- ಬಿ.ಟಿ. ಕುಮಾರಸ್ವಾಮಿ









» ಚಿತ್ರದುರ್ಗ

ಚಿತ್ರದುರ್ಗ ನಗರದ ಪೊಲೀಸ್ ಕವಾಯತು ಮೈದಾನದಲ್ಲಿ ಗುರುವಾರ ಜಿಲ್ಲಾಡಳಿತ, ಜಿಲ್ಲಾ ಪೊಲೀಸ್, ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖೆ, ರೆಡ್‌ಕ್ರಾಸ್ ಸೇರಿದಂತೆ ವಿವಿಧ ಇಲಾಖೆ ಹಾಗೂ ಸಂಸ್ಥೆಗಳ ಸಹಯೋಗದೊಂದಿಗೆ, ತುರ್ತು ಸಂದರ್ಭದಲ್ಲಿ ಸಾರ್ವಜನಿಕರ ಸಂರಕ್ಷಣೆ ಮಾಡುವ ಕುರಿತು "ಅಪರೇಷನ್ ಅಭ್ಯಾಸ್" ನಾಗರೀಕ ಸುರಕ್ಷಾ ಅಣಕು ಪ್ರದರ್ಶನ ನಡೆಸಲಾಯಿತು.

ಬಾಂಬ್ ಸ್ಫೋಟ, ಅಗ್ನಿ ಅವಘಡದಿಂದ ಉಂಟಾಗುವ ಅಪಾಯದ ಸನ್ನಿವೇಶವನ್ನು ನಗರದ ಪೊಲೀಸ್ ಕವಾಯತು ಮೈದಾನದಲ್ಲಿ ಸೃಷ್ಟಿಸಲಾಗಿತ್ತು. ಮೈದಾನದಲ್ಲಿ ಬಾಂಬ್ ಸ್ಫೋಟಗೊಂಡ ಕೂಡಲೆ, ಅಲ್ಲಿ ನೆರೆದಿದ್ದ ಸಾರ್ವಜನಿಕರು, ಅಂಗಡಿಕಾರರು ಕೆಳಕ್ಕೆ ಬಿದ್ದು, ನರಳಾಡುತ್ತಿದ್ದ ದೃಶ್ಯವನ್ನು ಸೃಷ್ಟಿಸಲಾಯಿತು. ಬಾಂಬ್ ಸ್ಫೋಟದ ಶಬ್ಧ ಕೇಳಿ ಬಂದ ತಕ್ಷಣ ಸೈರನ್ ಮೊಳಗಿತು. ಕಂಟ್ರೋಲ್ ರೂಂಗೆ ಮಾಹಿತಿ ರವಾನಿಸಲಾಯಿತು. ಶ್ವಾನದಳದೊಂದಿಗೆ ಆಗಮಿಸಿದ ಬಾಂಬ್ ನಿಷ್ಕ್ರೀಯ ದಳ ಪೊಲೀಸ್ ಕವಾಯತು ಮೈದಾನದ ವಿವಿಧೆಡೆ ಪರಿಶೀಲನೆ ಆರಂಭಿಸಿತು. ಈ ಸಂದರ್ಭದಲ್ಲಿ ಪೊಲೀಸ್ ಇಲಾಖೆ, ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖೆ ಹಾಗೂ ಆರೋಗ್ಯ ಇಲಾಖೆ, ರೆಡ್‌ಕ್ರಾಸ್ ಸಂಸ್ಥೆಯ ತಂಡದ ಸದಸ್ಯರು ಗಾಯಾಳುಗಳ ರಕ್ಷಣಾ ಕಾರ್ಯಕ್ಕೆ ಧಾವಿಸಿದರು. ವೈದ್ಯಕೀಯ ತಂಡ ಸ್ಥಳದಲ್ಲಿಯೇ ತುರ್ತು ಚಿಕಿತ್ಸೆ ಆರಂಭಿಸಿತು.

ಪೊಲೀಸ್ ಇಲಾಖೆಯ ವಿಧ್ವಂಸಕ ತಡೆ ರಕ್ಷಣಾ ದಳ ಎಎಸ್‌ಸಿ ತಂಡ ಮತ್ತು ಶ್ವಾನದಳ ತಪಾಸಣೆ, ಬಾಂಬ್ ಪತ್ತೆ ಮತ್ತು ನಿಷ್ಕ್ರಿಯಗೊಳಿಸುವ ತಂಡ, ಜಿಲ್ಲಾ ವಿಶೇಷ ಶಸ್ತ್ರಾಸ್ತ್ರ ಮತ್ತು ತಂತ್ರಗಳ ತಂಡ, ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿ, ಬೆಂಗಾವಲು ವಾಹನಗಳ ನಿಯೋಜನೆ, ಜೀರೋ ಟ್ರಾಫಿಕ್, ತಂಡಗಳು ಯೋಜಿತ ರೀತಿಯಲ್ಲಿ ಕಾರ್ಯನಿರ್ವಹಿಸಿದವು.

ರಾಜ್ಯ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖೆ ಅಧಿಕಾರಿ ಸೋಮಶೇಖರ್ ಅವರ ನೇತೃತ್ವದಲ್ಲಿ, ಅಗ್ನಿ ಅವಘಡ ಸಂದರ್ಭಗಳಲ್ಲಿ ಸಾವಜನಿಕರು ಕೈಗೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳು, ಬೆಂಕಿ ನಂದಿಸುವ ಬಗೆ ಹಾಗೂ ಅಗ್ನಿಶಾಮಕ ದಳದ ಸಿಬ್ಬಂದಿ ಕೈಗೊಳ್ಳುವ ಕಾರ್ಯಾಚರಣೆಯನ್ನು ಪ್ರಾತ್ಯಕ್ಷಿಕೆ ಮೂಲಕ ಪ್ರದರ್ಶಿಸಿದರು, ಅಲ್ಲದೆ ಯಾವುದೇ ಅಗ್ನಿ ಅವಘಡ ಸಂದರ್ಭದಲ್ಲಿ ತುರ್ತು ಸ್ಪಂದನೆಗಾಗಿ 101 ಅಥವಾ 112 ಕ್ಕೆ ಕರೆ ಮಾಡುವಂತೆ ಮನವಿ ಮಾಡಿದರು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ವೈದ್ಯಕೀಯ ತುರ್ತು ಸೇವೆಗಳು ಇಲಾಖೆಯು ಸ್ಥಳೀಯ ವಿಕೋಪ ಸ್ಪಂದನಾ ತಂಡದ ಸಹಾಯದೊಂದಿಗೆ ತುರ್ತಾಗಿ ಸ್ಪಂದಿಸಿ, ಪೊಲೀಸ್ ಇಲಾಖೆ, ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖೆ ಹಾಗೂ ತುರ್ತು ವೈದ್ಯಕೀಯ ಸೇವೆ ಸಹಯೋಗದೊಂದಿಗೆ ತುರ್ತು ಕಾರ್ಯನಿರ್ವಹಿಸಿದರು.

ರೆಡ್ ಕ್ರಾಸ್ ಸಂಸ್ಥೆಯಿಂದ ಇದೇ ಸಂದರ್ಭದಲ್ಲಿ ಪೊಲೀಸ್ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳಿಗೆ ಪ್ರಥಮ ಚಿಕಿತ್ಸಾ ಕಿಟ್ ಹಾಗೂ ಮಾಸ್ಕ್‌ಗಳನ್ನು ವಿತರಿಸಲಾಯಿತು.

ಅಣಕು ಪ್ರದರ್ಶನಕ್ಕೆ ಚಾಲನೆ ನೀಡಿದ ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ ಅವರು ಮಾತನಾಡಿ, ರಾಷ್ಟ್ರೀಯ ತುರ್ತು ಪರಿಸ್ಥಿತಿ ಮತ್ತು ವಿಕೋಪಗಳಿಂದ ಉಂಟಾಗುವ ಸಂದರ್ಭವನ್ನು ಸಮರ್ಥವಾಗಿ ನಿಭಾಯಿಸಲು ಹಾಗೂ ಇಂತಹ ಸಂದರ್ಭಗಳಲ್ಲಿ ಕಡಿಮೆ ಸಮಯದಲ್ಲಿ ತುರ್ತಾಗಿ ಸ್ಪಂದನೆ ದೊರಕುವಂತಾಗಲು ಜನರಲ್ಲಿ ಹೆಚ್ಚಿನ ಅರಿವು ಮೂಡಿಸುವುದು ಅಗತ್ಯ. ತುರ್ತು ಸಂದರ್ಭದಲ್ಲಿ ಜನರು ಗಾಬರಿಯಾಗದೇ ವಿವೇಚನೆಯಿಂದ ಕೈಗೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳ ಬಗ್ಗೆ ನಾಗರೀಕರಲ್ಲಿ ಜಾಗೃತಿ ಮೂಡಿಸುವುದು ಪ್ರಮುಖ ಉದ್ದೇಶವಾಗಿದೆ ಎಂದರು.

ಅಣಕು ಪ್ರದರ್ಶನದಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ, ಡಿವೈಎಸ್‌ಪಿ ಪಿ.ಕೆ. ದಿನಕರ್, ಜಿಲ್ಲಾ ಸಶಸ್ತ್ರ ಮೀಸಲು ಪಡೆ ಡಿವೈಎಸ್‌ಪಿ ಶ್ರೀನಿವಾಸ್, ಜಿಲ್ಲಾ ಆರೋಗ್ಯಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್, ಜಿಲ್ಲಾ ಅಗ್ನಿಶಾಮಕ ಅಧಿಕಾರಿ ಸೋಮಶೇಖರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್, ಡಿಯುಡಿಸಿ ಯೋಜನಾ ನಿರ್ದೇಶಕ ಮಹೇಂದ್ರ ಕುಮಾರ್, ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು, ಎನ್‌ಸಿಸಿ, ಭಾರತೀಯ ರೆಡ್‌ಕ್ರಾಸ್ ಜಿಲ್ಲಾ ಶಾಖೆಯ ಅನಂತ ರೆಡ್ಡಿ, ಅರುಣ್‌ಕುಮಾರ್, ಮಹಜರ್ ಉಲ್ಲಾ ಸೇರಿದಂತೆ ವಿವಿಧ ಪ್ರತಿನಿಧಿಗಳು ಹಾಗೂ ಸಾರ್ವಜನಿಕರು ಇದ್ದರು.

# ರಾಜಾವೀರ ಮದಕರಿನಾಯಕನ 243 ನೇ ಪುಣ್ಯಸ್ಮರಣೆ

» ಚಿತ್ರದುರ್ಗ



ನಾಡ ದೊರೆ ರಾಜಾವೀರ ಮದಕರಿನಾಯಕನ 243 ನೇ ಪುಣ್ಯಸ್ಮರಣೆಯನ್ನು ಗುರುವಾರ ನಾಯಕ ಸಮಾಜದಿಂದ ಆಚರಿಸಲಾಯಿತು.

ಮದಕರಿನಾಯಕನ ಪ್ರತಿಮೆಗೆ ಬೃಹಧಾಕಾರವಾದ ಹೂಮಾಲೆ ಅರ್ಪಿಸಿ ನಂತರ ರಾಜಾವೀರ 'ಮದಕರಿನಾಯಕ ಫೋಟೋಗೆ ಪುಷ್ಪನಮನ ಸಲ್ಲಿಸಿ ಬಳಿಕ ಅಪರ ಜಿಲ್ಲಾಧಿಕಾರಿ ಮೂಲಕ ರಾಜ್ಯದ ಮುಖ್ಯಮಂತ್ರಿಗೆ ಶ್ರೀರಂಗಪಟ್ಟಣದಲ್ಲಿ ರಾಜಾವೀರ ಮದಕರಿನಾಯಕನ ಸ್ಮಾರಕ ನಿರ್ಮಿಸುವಂತೆ ಒತ್ತಾಯಿಸಿದರು.

ನಾಯಕ ಸಮಾಜದ ಜಿಲ್ಲಾಧ್ಯಕ್ಷ ಹೆಚ್.ಜೆ.ಕೃಷ್ಣಮೂರ್ತಿ ಮಾತನಾಡಿ ರಾಜನಹಳ್ಳಿಯಲ್ಲಿ ನಮ್ಮ ಮಠವಿದೆ. ಸ್ವಾಮಿಜಿಗಳು ಹೇಳಿದಂತೆ ನಾವುಗಳು ಕೇಳುತ್ತೇವೆ.

ಅಮಿತ್‌ಷಾ ಚಿತ್ರದುರ್ಗಕ್ಕೆ ಬಂದಾಗ ಥೀಮ್ ಪಾರ್ಕ್ ನಿರ್ಮಿಸುವುದಾಗಿ ಭರವಸೆ ನೀಡಿದ್ದರೂ ಇದುವರೆವಿಗೂ ಈಡೇರಿಲ್ಲ. ತಿಮ್ಮಣ್ಣನಾಯಕ ಕೆರೆ ಸಮೀಪ ತೋಟಗಾರಿಕೆ ಇಲಾಖೆಗೆ ಸೇರಿದ ಸಾಕಷ್ಟು ಜಾಗವಿದೆ. ಅಲ್ಲಿ ಥೀಮ್ ಪಾರ್ಕ್ ನಿರ್ಮಿಸಬೇಕು. ಇಲ್ಲವಾದಲ್ಲಿ ಉಗ್ರ ಹೋರಾಟ ನಡೆಸುವುದಾಗಿ ಕೇಂದ್ರ ಸರ್ಕಾರವನ್ನು ಎಚ್ಚರಿಸಿದರು.

ರಾಜಾವ ುದಕರಿನಾಂುಕ ಮಾತನಾಡಿ ಶ್ರೀರಂಗಪಟ್ಟಣದ



ಪಶ್ಚಿಮ ವಾಹಿನಿ ತೀರದಲ್ಲಿ ರಾಜಾವೀರ ಮದಕರಿನಾಯಕರ ದೇಹ ದಹನವಾಯಿತು. ಹಾಗಾಗಿ ಅಲ್ಲಿ ಸ್ಮಾರಕವಾಗಬೇಕು. ದಕ್ಷಿಣ ಭಾರತದಲ್ಲಿಯೆ ಅತ್ಯಂತ ಪ್ರಮುಖ ಐತಿಹಾಸಿಕ ಸ್ಥಳವಾಗಿರುವ ಚಿತ್ರದುರ್ಗಕ್ಕೆ ಕೇಂದ್ರ ಗೃಹ ಸಚಿವ ಅಮಿತ್‌ಷಾ ಭೇಟಿ ನೀಡಿದಾಗ ಥೀಂ ಪಾರ್ಕ್ ನಿರ್ಮಿಸುವುದಾಗಿ ಹೇಳಿ ಹೋಗಿದ್ದರು. ಇನ್ನು ಆಗಿಲ್ಲ. ಕೇಂದ್ರ ಸರ್ಕಾರ ಈ ಬಗ್ಗೆ ಗಂಭೀರವಾಗಿ ಚಿಂತಿಸಬೇಕಿದೆ ಎಂದರು.

ಬಾಲೇನಹಳ್ಳಿ ತಿಪ್ಪೇಸ್ವಾಮಿ, ನಗರಸಭೆ ಸದಸ್ಯ ವೆಂಕಟೇಶ್, ಮಾಜಿ ಸದಸ್ಯ ತಿಪ್ಪೇಸ್ವಾಮಿ, ಜಿಲ್ಲಾ ಕಾಂಗ್ರೆಸ್ ಎಸ್.ಟಿ.ಸೆಲ್ ವಿಭಾಗದ ಅಧ್ಯಕ್ಷ ಮಂಜುನಾಥ್, ರತ್ನಮ್ಮ ಹೆಚ್.ಅಂಜಿನಪ್ಪ, ಪ್ರಶಾಂತ್ ಕೂಲಿಕಾರ್, ಯುವ ನ್ಯಾಯವಾದಿ ಅಶೋಕ್‌ಬೆಳಗಟ್ಟ, ಓಬಳೇಶ್ ಮುದ್ದಾಪುರ ಹೊಸಹಟ್ಟಿ ಇನ್ನು ಅನೇಕು ಪುಣ್ಯಸ್ಮರಣೆಯಲ್ಲಿ ಪಾಲ್ಗೊಂಡಿದ್ದರು.

# ರಾಜ್ಯ ಮತ್ತು ಕೇಂದ್ರ ಸರ್ಕಾರ ರೈತ ವಿರೋಧಿ ನೀತಿ ಖಂಡಿಸಿ ಪ್ರತಿಭಟನೆ




» ಚಿತ್ರದುರ್ಗ

ರಾಜ್ಯ ಸರ್ಕಾರ ಕೃಷಿ ಪಂಪ್‌ಸೆಟ್‌ಗಳಿಗೆ ಸ್ಮಾರ್ಟ್‌ಕಾರ್ಡ್, ಡಿಜಿಟಲ್ ಮೀಟರ್ ಅಳವಡಿಸಲು ಹತ್ತು ಸಾವಿರ ರೂ.ಗಳ ಶುಲ್ಕ ನಿಗಧಿಪಡಿಸಿರುವುದನ್ನು ವಿರೋಧಿಸಿ ತಿಪ್ಪಜ್ಜಿ ಸರ್ಕಲ್ ಸಮೀಪವಿರುವ ಬೆಸ್ಕಾಂ ಎದುರು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರುಸೇನೆಯಿಂದ ಗುರುವಾರ ಪ್ರತಿಭಟನೆ ನಡೆಸಿ ಕಾರ್ಯಪಾಲಕ ಇಂಜಿನಿಯರ್‌ಗೆ ಮನವಿ ಸಲ್ಲಿಸಲಾಯಿತು.ಪ್ರವಾಸಿ ಮಂದಿರದಿಂದ ಇಂಧನ ಸಚಿವರ ಅಣಕು ಶವಯಾತ್ರೆ ಮೂಲಕ ಬೆಸ್ಕಾಂಗೆ ಆಗಮಿಸಿದ ರೈತರು ರಾಜ್ಯ ಸರ್ಕಾರದ ರೈತ ವಿರೋಧಿ ನೀತಿ ವಿರುದ್ದ ಧಿಕ್ಕಾರಗಳನ್ನು ಕೂಗಿದರು.ವಿದ್ಯುತ್ ಕ್ಷೇತ್ರವನ್ನು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಖಾಸಗಿಕರಣಗೊಳಿಸಲು ನಡೆಸುತ್ತಿರುವ ಹುನ್ನಾರ ನಿಲ್ಲಬೇಕು. ಅಕ್ರಮ-ಸಕ್ರಮ ಅಡಿಯಲ್ಲಿ ರೈತರಿಗೆ ಈ ಹಿಂದೆ ವಿದ್ಯುತ್ ಪರಿಕರಗಳನ್ನು ನೀಡಿದಂತೆ ಉಚಿತ ವಿದ್ಯುತ್ ಕಲ್ಪಿಸಬೇಕು. ವಿದ್ಯುತ್ ಸಂಪರ್ಕಕ್ಕೆ ರೈತರ ಆಧಾರ್ ಜೋಡಣೆ ಮಾಡುವುದನ್ನು ಕೈಬಿಡಬೇಕು. ಸರ್ಕಾರ ಟಿ.ಸಿ.ಗಳನ್ನು ಮಾತ್ರ ನೀಡುತ್ತಿದ್ದು, ಕಂಬ ಮತ್ತು ವೈರ್‌ಗಳನ್ನು ರೈತರೆ ಸ್ವಂತ ಖರ್ಚಿನಿಂದ ಜೋಡಿಸಿಕೊಳ್ಳಲು ಸಾಧ್ಯವಿಲ್ಲ. ಅದಕ್ಕಾಗಿ ಸರ್ಕಾರವೇ ವಿತರಿಸಬೇಕು. ಜಮೀನಿನಲ್ಲಿ ವಾಸವಾಗಿರುವ ರೈತರಿಗೆ, ವಿದ್ಯಾರ್ಥಿಗಳಿಗೆ, ಹೈನುಗಾರಿಕೆ ನಡೆಸುವವರಿಗೆ ಸಂಜೆ ಆರು ಗಂಟೆಯಿಂದ ಬೆಳಿಗ್ಗೆ 6 ಗಂಟೆತನಕ ಸಮರ್ಪಕ ವಿದ್ಯುತ್ ನೀಡಬೇಕು. 11 ಕೆ.ವಿ. ಮತ್ತು ಎಲ್.ಟಿ.ಲೈನ್‌ಗಳಲ್ಲಿ ಹದಿನೈದು ವರ್ಷಗಳಿಂದ ಬೆಳೆದಿರುವ ಗಿಡ ಮರಗಳಿಂದಾಗಿ ಕರೆಂಟ್ ತಾಗಿ ಲೈನ್ ವೈರ್‌ಗಳು ಸುಟ್ಟು ಹೋಗುತ್ತಿವೆ. ಕೃಷಿ ಪಂಪ್‌ಸೆಟ್, ಟಿ.ಸಿ.ಮೋಟಾರ್, ಕೇಬಲ್‌ಗಳು ಸುಟ್ಟು ರೈತರು ನಷ್ಟ ಅನುಭವಿಸುತ್ತಿದ್ದಾರೆ. ಆದ್ದರಿಂದ ಗಿಡ-ಮರಗಳನ್ನು ಕೂಡಲೆ ತೆರವುಗೊಳಿಸುವಂತೆ ಪ್ರತಿಭಟನಾನಿರತ ರೈತರು ಒತ್ತಾಯಿಸಿದರು.

ಪುಟ 2

## ಫಾಸ್ಟ್ ನ್ಯೂಸ್

### ರಾಜ್ಯ ಮತ್ತು ಕೇಂದ್ರ ಸರ್ಕಾರ ರೈತ ವಿರೋಧಿ ನೀತಿ ಖಂಡಿಸಿ ಪ್ರತಿಭಟನೆ

» ಮೊದಲ ಪುಟದಿಂದ

ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರುಸೇನೆ ಜಿಲ್ಲಾಧ್ಯಕ್ಷ ಈ.ಎನ್.ಲಕ್ಷ್ಮಿಕಾಂತ್ ಲಿಂಗಾವರಹಟ್ಟಿ, ತಾಲ್ಲೂಕು ಅಧ್ಯಕ್ಷ ಶಿವಮೂರ್ತಿ, ಮಹಿಳಾಧ್ಯಕ್ಷೆ ಲೋಲಾಕ್ಷಮ್ಮ ಜಿಲ್ಲಾ ಕಾರ್ಯಾಧ್ಯಕ್ಷ ಓಂಕಾರಪ್ಪ, ಸಿ.ಡಿ.ನಿಲಿಂಗಪ್ಪ, ತಿಪ್ಪೇಸ್ವಾಮಿ, ನಾಗರಾಜ್, ಶ್ರೀನಿವಾಸ್, ರಂಗಸ್ವಾಮಿ, ಜಯಲಕ್ಷ್ಮಿ, ಮಂಜುಳ, ನಾಗರಾಜ್, ರುದ್ರಮುನಿ, ತಿಪ್ಪೇಸ್ವಾಮಿ ಶಶಿಕಲ, ಸೈಯದ್ ಮಮ್ತಾಜ್, ಬಸವರಾಜರೆಡ್ಡಿ, ಮಹೇಶ್ವರಿ, ಮಂಜುನಾಥ ಇನ್ನು ಮುಂತಾದವರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

### ರಿಯಾಯಿತಿ ದರದಲ್ಲಿ ಗೋದಾಮುಗಳ ಬಾಡಿಗೆ

» ದಾವಣಗೆರೆ

ಕರ್ನಾಟಕ ರಾಜ್ಯ ಉಗ್ರಾಣ ನಿಗಮವು ಸರ್ಕಾರದ ಅಂಗ ಸಂಸ್ಥೆಯಾಗಿದ್ದು, ರಾಜ್ಯಾದ್ಯಂತ 161 ಉಗ್ರಾಣ ಕೇಂದ್ರಗಳ ಮೂಲಕ ರೈತರಿಗೆ, ರೈತ ಉತ್ಪಾದಕ ಸಂಸ್ಥೆ, ಸರ್ಕಾರಿ ಸಂಸ್ಥೆಗಳಿಗೆ ಹಾಗೂ ವ್ಯಾಪಾರಸ್ಥರಿಗೆ, ಇತರೆ ಸಂಘ ಸಂಸ್ಥೆಗಳಿಗೆ ರಿಯಾಯಿತಿ ದರದಲ್ಲಿ ಗೋದಾಮುಗಳನ್ನು ಬಾಡಿಗೆಗೆ ನೀಡಲು ಇಚ್ಚಿಸಿದ್ದು, ಕೃಷಿ ಉತ್ಪನ್ನಗಳನ್ನು ವೈಜ್ಞಾನಿಕ ಸರಕು ಸಂಗ್ರಹಣಾ ಸೌಲಭ್ಯ ಒದಗಿಸುತ್ತಿದೆ. ಆಸಕ್ತರು ಈ ಅವಕಾಶವನ್ನು ಸದುಪಯೋಗಪಡೆದುಕೊಳ್ಳಬಹುದು ಎಂದು ಕರ್ನಾಟಕ ರಾಜ್ಯ ಉಗ್ರಾಣ ನಿಗಮದ ಪ್ರಾದೇಶಿಕ ವ್ಯವಸ್ಥಾಪಕರು ತಿಳಿಸಿದ್ದಾರೆ.

ಅದರಂತೆ ಜಿಲ್ಲೆಯ ಚನ್ನಗಿರಿ ತಾಲ್ಲೂಕಿನ ಸಾಗರಪೇಟೆಯಲ್ಲಿ 3 ಗೋದಾಮುಗಳನ್ನು ಸ್ಥಾಪಿಸಿದ್ದು, ಒಟ್ಟಾರೆ 7 ಸಾವಿರ ಮೆಟ್ರಿಕ್ ಟನ್ ಸಾಮರ್ಥ್ಯ ಮತ್ತು ಹೊಸಹಳ್ಳಿಯಲ್ಲಿ 2 ಗೋದಾಮುಗಳನ್ನು ಸ್ಥಾಪಿಸಿದ್ದು, ಒಟ್ಟಾರೆ 10108 ಮೆಟ್ರಿಕ್ ಟನ್ ಸಾಮರ್ಥ್ಯದ ಗೋದಾಮುಗಳನ್ನು ನಿರ್ಮಿಸಲಾಗದೆ. ಆಸಕ್ತಿಯುಳ್ಳವರು ಕರ್ನಾಟಕ ರಾಜ್ಯ ಉಗ್ರಾಣ ನಿಗಮ ಪ್ರಾದೇಶಿಕ ವ್ಯವಸ್ಥಾಪಕರು ದೂರವಾಣಿ ಸಂಖ್ಯೆ 7760966953 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಪಾಲಿ ನೆರಳು ಪರದೆ ಕಾರ್ಯಕ್ರಮಕ್ಕೆ ಅರ್ಜಿ ಆಹ್ವಾನ

» ದಾವಣಗೆರೆ

ಪರಿಶಿಷ್ಟ ಪಂಗಡದ ರೈತರಿಗೆ 2018-19ನೇ ಸಾಲಿನ ಭಾರತದ ಸಂವಿಧಾನ ಅನುಚ್ಛೇದ 275/1 ರಡಿ ಪರಿಶಿಷ್ಟ ವರ್ಗದವರ ಅಭಿವೃದ್ಧಿ ಕಾರ್ಯಕ್ರಮದಡಿ ಪಾಲಿ, ನೆರಳು ಪರದೆ ಕಾರ್ಯಕ್ರಮಕ್ಕೆ ಫಲಾನುಭವಿವಂತಿಕೆ ನೀಡಲು ಸಿದ್ದರಿರುವ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ರೂ.2,11,000/- ಗಳನ್ನು ಜಿಲ್ಲಾಧಿಕಾರಿ ಮತ್ತು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ, ದಾವಣಗೆರೆ ರವರ ಹೆಸರಿನಲ್ಲಿ ಡಿ.ಡಿ. ಮೂಲಕ ಫಲಾನುಭವಿ ವಂತಿಕೆ ಭರಿಸಲು ಸಿದ್ಧರಿರುವ ಆಸಕ್ತ ಅರ್ಜಿದಾರಿಂದ ಇದೇ ಮೇ.23 ರ ಒಳಗಾಗಿ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು, ಕೊಠಡಿ ಸಂಖ್ಯೆ:45, ಡಿ.ಸಿ ಕಚೇರಿ, ದಾವಣಗೆರೆ, ಇಲ್ಲಿ ಅರ್ಜಿಯನ್ನು ಪಡೆಯಬಹುದು. ಅರ್ಜಿದಾರರು ಪರಿಶಿಷ್ಟ ಪಂಗಡಕ್ಕೆ ಸೇರಿದ್ದು ಸಣ್ಣ ಮತ್ತು ಅತಿ ಸಣ್ಣ ರೈತರಾಗಿ, ನೀರಾವರಿ ಸೌಲಭ್ಯ ಹೊಂದಿರಬೇಕು, ಫಲಾನುಭವಿಗಳ ವಾರ್ಷಿಕ ಆದಾಯ ರೂ.1.50 ಲಕ್ಷಗಳ ಒಳಗಡೆ ಇರಬೇಕು, ವಿದ್ಯುತ್ ಮಾರ್ಗ, ಸಂಪರ್ಕ ಹೊಂದಿರುವ ಕುರಿತು ಮಾಹಿತಿ, ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ, ದಾವಣಗೆರೆ ರವರ ಹೆಸರಿನಲ್ಲಿ ರೂ.2,11,000/-ಗಳನ್ನು ಡಿ.ಡಿ ಪಾವತಿಸಿದ ಚಲನ್, ಫಲಾನುಭವಿಯ ಹೆಸರಿನಲ್ಲಿರುವ ಪ್ರಸಕ್ತ ಸಾಲಿನ ಪಹಣಿ ಹೊಂದಿರಬೇಕು, ಅರ್ಜಿದಾರರು ಹಾಗೂ ಅವರ ಅವಲಂಬಿತ ಕುಟುಂಬ ಸದಸ್ಯರು ಸರ್ಕಾರಿ ನೌಕರಿಯಲ್ಲಿರಬಾರದು, ಘಟಕ ಸದುಪಯೋಗಪಡಿಸಿಕೊಳ್ಳುವ ಬಗ್ಗೆ ಪ್ರಮಾಣ ಪತ್ರ ಮುಚ್ಚಳಿಕೆ ಪತ್ರ ನೀಡಬೇಕು, ಅರ್ಜಿದಾರರಾಗಲೀ, ಕುಟುಂಬದ ಸದಸ್ಯರಾಗಲೀ ಯಾವುದೇ ಇಲಾಖೆ ನಿಗಮದಿಂದ ಈ ಹಿಂದೆ ಯಾವುದೇ ಯೋಜನೆಯಡಿ ಸೌಲಭ್ಯವನ್ನು ಪಡೆದಿರಬಾರದೆಂದು ಇಲಾಖೆಯ ಅಧಿಕಾರಿ ತಿಳಿಸಿದ್ದಾರೆ.

### ಐಟಿಐ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

» ದಾವಣಗೆರೆ

ಆಗಸ್ಟ್-2025 ನೇ ಶೈಕ್ಷಣಿಕ ಸಾಲಿಗೆ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ, ಹರಿಹರ ಆ□□ಲೈನ್ ಪ್ರವೇಶಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಸಂಸ್ಥೆಯಲ್ಲಿ ಲಭ್ಯವಿರುವ ವೃತ್ತಿಗಳಿಗೆ ಪ್ರವೇಶ ಬಯಸುವ ಅರ್ಹ ಅಭ್ಯರ್ಥಿಗಳು ಆ□□ಲೈನ್ ಮೂಲಕ ಇಲಾಖಾ ವೆ□□ಸೈಟ್ www.cite.karnataka.gov.in ನಲ್ಲಿ ಯಾವುದೇ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ, ಅಥವಾ ಇಂಟರ್ ನೆಟ್ ಕೆಫೆ, ಸೈಬರ್ ಕೆಫೆನಲ್ಲಿ ಮೇ.28 ರವರೆಗೆ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಮೊ.ಸಂ:9480085001, 9945049894, 9743104863, 7676211812 ನ್ನು ಸಂಪರ್ಕಿಸಲು ಪ್ರಾಚಾರ್ಯರಾದ ಜಯಪ್ಪ ತಿಳಿಸಿದ್ದಾರೆ.

## ಶಕ್ತಿ ಯೋಜನೆ: ಕೆಎಸ್ಸಾರ್ಟಿಸಿಗೆ ರೂ.177.33 ಕೋಟಿ ಆದಾಯ

# ಚಿತ್ರದುರ್ಗ: 4.36 ಕೋಟಿ ನಾರಿಯರು ಪ್ರಯಾಣ

» ಚಿತ್ರದುರ್ಗ

ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಶಕ್ತಿ ಯೋಜನೆ ಜಾರಿಯಾಗಿ ಮುಂಬರುವ ಜೂನ್ 11 ಕ್ಕೆ ಎರಡು ವರ್ಷ ಪೂರ್ಣಗೊಳ್ಳಲಿದ್ದು, ಈ ಯೋಜನೆಯಡಿ ಜಿಲ್ಲೆಯ ಸಾರಿಗೆ ಸಂಸ್ಥೆಯ ಬಸ್‌ಗಳಲ್ಲಿ 4.36 ಕೋಟಿ ನಾರಿಯರು ಉಚಿತ ಪ್ರಯಾಣ ಬೆಳೆಸಿರುವುದು ಗಮನಾರ್ಹ.

ಮಹಿಳಾ ಸಬಲೀಕರಣ ಉದ್ದೇಶದಿಂದ ಜಾರಿಗೊಳಿಸಿದ ಮಹಿಳೆಯರಿಗೆ ಉಚಿತ ಸಾರಿಗೆ ಸೇವೆ ನೀಡುವ ಶಕ್ತಿ ಯೋಜನೆಯಡಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ ಚಿತ್ರದುರ್ಗ ವಿಭಾಗಕ್ಕೆ ಮಹಿಳೆಯರಿಗೆ ನೀಡಿರುವ ಶೂನ್ಯ ದರದ ಟಿಕೆಟ್ ನೀಡಿಕೆ

ಶಕ್ತಿ
ಮಹಿಳೆಯರಿಗೆ
ಬಸ್ ಪ್ರಯಾಣ ಉಚಿತ

ಮೂಲಕ ರೂ.177,33,69463 ಕೋಟಿ ಆದಾಯ ಲಭಿಸಿದೆ.

ದುಡಿಯುವ ಮಹಿಳೆಯರಿಗೆ ಶಕ್ತಿ: ರಾಜ್ಯ ಸರ್ಕಾರದ ಪ್ರಮುಖ ಧ್ಯೇಯವು ದುಡಿಯುವ ಮಹಿಳೆಯರಿಗೆ ಬಡವರ್ಗದ ಮಹಿಳೆಯರಿಗೆ ಆತ್ಮಸ್ಥೈರ್ಯ ತುಂಬುವುದು ಆಗಿದೆ. ಗ್ಯಾರಂಟಿ ಯೋಜನೆಗಲ್ಲೊಂದಾದ ಶಕ್ತಿ ಯೋಜನೆಯು ದುಡಿಯುವ ಮಹಿಳೆಯರಿಗೆ ಇನ್ನಷ್ಟು ಶಕ್ತಿ ತುಂಬುತ್ತಿದೆ. ಗ್ರಾಮೀಣ ಭಾಗದಲ್ಲಿ ಹೆಣ್ಣು ಕುಟುಂಬದ ಕಣ್ಣಾಗಿದ್ದು, ತನ್ನ ಕುಟುಂಬದ ಪೋಷಣೆಗಾಗಿ ಸಣ್ಣ ವ್ಯಾಪಾರ-ವಹಿವಾಟುಗಳಿಗೆ ನಗರಕ್ಕೆ ಮುಖಮಾಡಿ ಬರುವಾಗ ಅವಳ ಪ್ರಯಾಣದ ಖರ್ಚು ತನ್ನ ಆದಾಯದ ಅರ್ಧದಷ್ಟಾಗುತ್ತದೆ. ತಮ್ಮ ವ್ಯಾಪಾರ-ವಹಿವಾಟು ನಡೆಸಲು ಅದರ ಭಾರವನ್ನು ಹೊರೆಯಾಗದಂತೆ ನಿರ್ವಹಿಸಲು ಶಕ್ತಿ ಯೋಜನೆ ಸಹಕಾರಿಯಾಗಿದೆ.

ಪ್ರತಿ ನಿತ್ಯ ಸರಾಸರಿ ರೂ.25.55 ಲಕ್ಷ ಆದಾಯ : ಪ್ರತಿ ನಿತ್ಯ ಸರಾಸರಿ 62,837 ಮಹಿಳಾ ಪ್ರಯಾಣಿಕರು ಶಕ್ತಿ ಯೋಜನೆಯ ಸದುಪಯೋಗ ಪಡೆದುಕೊಳ್ಳುತ್ತಿದ್ದು, ಪ್ರತಿ ನಿತ್ಯ ಸರಾಸರಿ ಶಕ್ತಿ ಯೋಜನೆಯಿಂದ ಚಿತ್ರದುರ್ಗ ವಿಭಾಗಕ್ಕೆ ರೂ.25,55,287 ಆದಾಯ ಬರುತ್ತಿದೆ.

ಚಿತ್ರದುರ್ಗ ವಿಭಾಗದ ವತಿಯಿಂದ ಶಕ್ತಿ ಯೋಜನೆ ಆರಂಭವಾದ 2023ರ ಜೂನ್ ಮಾಹೆಯಿಂದ 2025ರ ಮೇ 04 ರವರೆಗೆ ನಗರ, ಸಾಮಾನ್ಯ ಹಾಗೂ ವೇಗದೂತ ಸಾರಿಗೆಗಳಲ್ಲಿ ಒಟ್ಟು 4,36,09138 ಮಹಿಳಾ ಪ್ರಯಾಣಿಕರು ಉಚಿತವಾಗಿ ಪ್ರಯಾಣಿಸಿದ್ದಾರೆ.

ಸಾರಿಗೆ ಸಂಸ್ಥೆಯ ಚಿತ್ರದುರ್ಗ ವಿಭಾಗಕ್ಕೆ ಇಲ್ಲಿಯವರೆಗೆ ಒಟ್ಟು ರೂ.177,33,69463 ಕೋಟಿ ಆದಾಯ ಬಂದಿದೆ.

ರಾಜ್ಯದ ಮಹಿಳೆಯರಿಗೆ ಸರ್ಕಾರಿ ಬಸ್‌ಗಳಲ್ಲಿ ಉಚಿತವಾಗಿ ಪ್ರಯಾಣಿಸುವಂತಾಗಲು ಶಕ್ತಿ ಯೋಜನೆ ಜಾರಿಯಾದ ನಂತರ ಹಣ ಪಾವತಿಸುವ ಪ್ರಯಾಣಿಕರು ಸೇರಿದಂತೆ ಪ್ರಯಾಣಿಕರ ಸಂಖ್ಯೆ ಹೆಚ್ಚಿರುವುದರಿಂದ ರಾಜ್ಯ ಸಾರಿಗೆ ನಿಗಮಗಳು ಸ್ವಾವಲಂಬಿಯಾಗುತ್ತಿವೆ. ಶಕ್ತಿ ಯೋಜನೆಯು ಪ್ರವಾಸೋದ್ಯಮಕ್ಕೂ ಉತ್ತೇಜನ ನೀಡುವುದರ ಜೊತೆಗೆ ಉದ್ಯೋಗಗಳ ಸೃಷ್ಟಿ ಮತ್ತು ಆರ್ಥಿಕ ಬೆಳವಣಿಗೆಗೆ ಸಹಾಯ ಮಾಡಿದೆ.

ರಾಜ್ಯ ಸರ್ಕಾರದ ಶಕ್ತಿ ಯೋಜನೆಯು ಸಾಮಾಜಿಕ ಕ್ಷೇತ್ರದಲ್ಲಿ ಹಲವು ರೀತಿಯ ಬದಲಾವಣೆಗೆ ಸಾಕ್ಷಿಯಾಗಿದೆ. ಮುಖ್ಯವಾಗಿ ಗ್ರಾಮೀಣ ಭಾಗದಿಂದ ನಗರ ಪಟ್ಟಣಗಳಿಗೆ ತೆರಳಿ ದುಡಿಯುವ ಮಹಿಳೆಯರಿಗೆ ವರದಾನವಾಗಿದೆ. ಖಾಸಗಿ ಹಾಗೂ ಅಸಂಘಟಿತ ವಲಯಗಳಲ್ಲಿ ಕೆಲಸ ನಿರ್ವಹಿಸುವ ಮಹಿಳೆಯರು ಸಂಚಾರಿ ವೆಚ್ಚದಿಂದ ಮುಕ್ತರಾಗಿದ್ದಾರೆ. ಮಹಿಳೆಯರು ಸಾಮಾನ್ಯವಾಗಿ ದುಡಿಯಲೆಂದೆ ತಮ್ಮ ತಿಂಗಳ ಆದಾಯದ ಶೇ.10ರಷ್ಟು ಹಣವವನ್ನು ಸಂಚಾರಕ್ಕಾಗಿ ವ್ಯಯಿಸಬೇಕಿತ್ತು. ಇನ್ನು ಶಾಲಾ-ಕಾಲೇಜು ವಿದ್ಯಾರ್ಥಿನಿಯರು ವಾರ್ಷಿಕ ಪಾಸ್ ಪಡೆಯಲು ನೀಡಬೇಕಿದ್ದ ಹಣದಲ್ಲಿಯೂ ಉಳಿತಾಯವಾಗಿದೆ. ಉದ್ಯೋಗ, ಶಿಕ್ಷಣ ಹಾಗೂ ಪ್ರವಾಸ ಸೇರಿದಂತೆ ಹಲವು ಚಟುವಟಿಕೆಗಳಿಗೆ ಶಕ್ತಿ ಯೋಜನೆಯಿಂದ ಶಕ್ತಿ ಲಭಿಸಿದೆ.

ಕೆಎಸ್‌ಆರ್‌ಟಿಸಿ ಬಸ್‌ಗಳ ಭರ್ತಿಯ ಜೊತೆಗೆ ನಾರಿಯರು ಆದಾಯ ಹೆಚ್ಚಿಸಿದ್ದಾರೆ. ಧಾರ್ಮಿಕ ಕೇಂದ್ರ ಹಾಗೂ ಪ್ರವಾಸಿ ತಾಣಗಳಿಗೂ ಭೇಟಿ ನೀಡುವವರ ಸಂಖ್ಯೆಯೂ ಹೆಚ್ಚಳಕ್ಕೆ ಕಾರಣವಾಗಿದೆ. ಇದರಿಂದ ಧಾರ್ಮಿಕ ಕೇಂದ್ರಗಳಲ್ಲೂ ದೇಣಿಗೆ ಸಂಗ್ರಹವೂ ಸಹ ದುಪ್ಪಟ್ಟಾಗಿದೆ.

ರಾಜ್ಯ ಸರ್ಕಾರವು ರಾಜ್ಯದ ಎಲ್ಲ ಮಹಿಳೆಯರಿಗೆ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಬೆಂಗಳೂರು ಮಹಾ ನಗರ ಸಾರಿಗೆ ಸಂಸ್ಥೆ, ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವಾಹನಗಳಲ್ಲಿ ಉಚಿತವಾಗಿ ಪ್ರಯಾಣಿಸುವ ಸೌಲಭ್ಯವನ್ನು ನೀಡುವ ಸಂಬಂಧ "ಶಕ್ತಿ ಯೋಜನೆ"ಯನ್ನು 2023ರ ಜೂನ್ 11 ರಿಂದ ಜಾರಿಗೊಳಿಸಲಾಗಿದೆ. ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಶಕ್ತಿ ಯೋಜನೆ ಜಾರಿಯಾದಾಗಿನಿಂದಲೂ ಯಶಸ್ವಿಯಾಗಿ ನಡೆಯುತ್ತಿದ್ದು, ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ ಎನ್ನುತ್ತಾರೆ ಚಿತ್ರದುರ್ಗ ಕೆಎಸ್‌ಆರ್‌ಟಿಸಿ ವಿಭಾಗೀಯ ನಿಯಂತ್ರಣಾಧಿಕಾರಿ ವೆಂಕಟೇಶ್ ಅವರು.





ಶಕ್ತಿ ಯೋಜನೆಯಿಂದ ಗ್ರಾಮೀಣ ಪ್ರದೇಶದ ಮಹಿಳೆಯರು ಸಾಕಷ್ಟು ಪ್ರಯೋಜನ ಪಡೆಯುತ್ತಿದ್ದೇವೆ. ಇಲ್ಲಿಯವರೆಗೂ ನಾವ ಕೆಲವು ಪುಣ್ಯ ಕ್ಷೇತ್ರಗಳ ದೇವಸ್ಥಾನಗಳ ದರ್ಶನವನ್ನೇ ಮಾಡಿರಲ್ಲಿಲ್ಲ. ಆಸೆ ಇದ್ದರೂ ದೂರದೂರದ ಊರುಗಳಿಗೆ ಬಸ್‌ನಲ್ಲಿ ಹೋಗಲು ಹೆಚ್ಚು ಹಣ ಖರ್ಚಾಗುತ್ತದೆ ಎಂದು ಹೋಗಲು ಆಗಿರಲಿಲ್ಲ. ಸರ್ಕಾರದ ಗ್ಯಾರಂಟಿ ಯೋಜನೆಯಾಗಿರುವ ಶಕ್ತಿ ಯೋಜನೆಯಿಂದ ಮಕ್ಕಳು ಹಾಗೂ ನಮ್ಮ ಕುಟುಂಬದ ಎಲ್ಲರೂ ಹಲವಾರು ತೀರ್ಥಕ್ಷೇತ್ರಗಳ ದರ್ಶನದ ಭಾಗ್ಯವನ್ನು ಪಡೆದಿದ್ದೇವೆ. ಈ ಯೋಜನೆಯ ನಿರಂತರತೆಯನ್ನು ಸರ್ಕಾರ ಕಾಯ್ದುಕೊಂಡರೆ ನಮ್ಮಂತ ಹಲವಾರು ಮಹಿಳೆಯರಿಗೆ, ಮಕ್ಕಳಿಗೆ ಯೋಜನೆಯ ಮೂಲಕ ಅನುಕೂಲವಾಗಲಿದೆ. ಇಂತಹ ಉತ್ತಮ ಯೋಜನೆಯನ್ನು ನಮಗಾಗಿ ನೀಡಿದ ಈ ಸರ್ಕಾರಕ್ಕೆ ಧನ್ಯವಾದ ಹೇಳುತ್ತೇವೆ.

■ ಎ.ಅಂಜಲಿ, ವಿ. ಪಾಳ್ಯ



ನಮ್ಮದು ಮೂಲತಃ ಬಡ ಕುಟುಂಬ ವಾಗಿದ್ದು, ಅಂದಿನ ದಿವಸ ದುಡಿದ ಹಣದಿಂದ ಜೀವನ ಸಾಗಿಸುವುದೆ ದೊಡ್ಡ ಸಂಗತಿ, ಇಂತಹ ಸಂದರ್ಭದಲ್ಲಿ ಕರ್ನಾಟಕ ಸರ್ಕಾರದಿಂದ ಜಾರಿಗೆ ಬಂದ ಗ್ಯಾರಂಟಿ ಯೋಜನೆಯಾದ ಶಕ್ತಿ ಯೋಜನೆಯಿಂದ ಧಾರ್ಮಿಕ ಪುಣ್ಯ ಕ್ಷೇತ್ರ ಸ್ಥಳಗಳಾದ ಕುಕ್ಕೆ ಸುಬ್ರಮಣ್ಯ, ಧರ್ಮಸ್ಥಳ, ಸಿಗಂಧೂರು ಚೌಡೇಶ್ವರಿ ದೇವಸ್ಥಾನಗಳಿಗೆ ಭೇಟಿ ನೀಡಿ, ನಾನು ಮತ್ತು ನನ್ನ ಕುಟುಂಬಕ್ಕೆ ದರ್ಶನದ ಭಾಗ್ಯ ದೊರೆತಂತಾಯಿತು. ಹೀಗೆ ಒಂದಲ್ಲಾ ಒಂದು ರೀತಿಯ ಕೆಲಸ ಕಾರ್ಯಗಳಿಗೆ ಹಲವಾರು ಕುಟುಂಬಗಳು ಶಕ್ತಿ ಯೋಜನೆಯಿಂದ ಸದುಪಯೋಗವನ್ನು ಪಡೆಯುತ್ತಿವೆ. ನಮ್ಮಂತಹ ಬಡ ಕುಟುಂಬಗಳು ಪುಣ್ಯ ಕ್ಷೇತ್ರ ದರ್ಶನವನ್ನು ಉಚಿತವಾಗಿ ಹೋಗಿ ಮಾಡುತ್ತಿದ್ದು, ಸರ್ಕಾರಕ್ಕೂ ಕೂಡ ಇದರ ಪುಣ್ಯ ಪ್ರಾಪ್ತಿಯಾಗಲಿದೆ. ಶಕ್ತಿ ಯೋಜನೆ ನೀಡಿದ ಈ ಸರ್ಕಾರಕ್ಕೆ ನಾವು ಧನ್ಯವಾದಗಳನ್ನು ಸಲ್ಲಿಸುತ್ತೇವೆ.

■ ದೇವೀರಮ್ಮ, ಹೊಳಲ್ಕೆರೆ

# ನಿರಂತರ ಜಾಗೃತಿ ಕಾರ್ಯಕ್ರಮಗಳಿಂದ ಡೆಂಗ್ಯೂ ನಿಯಂತ್ರಣಕ್ಕೆ ಪ್ರಾಮಾಣಿಕ ಯತ್ನ: ಸುರೇಶ್

» ಚಳ್ಳಕೆರೆ

ರಾಷ್ಟ್ರೀಯ ಡೆಂಗ್ಯೂ ದಿನ ಆಚರಣೆ ಹಿನ್ನೆಲೆಯಲ್ಲಿ ಸಾರ್ವಜನಿಕ ಆಸ್ಪತ್ರೆ ಸಭಾಂಗಣದಲ್ಲಿ ತಾಲ್ಲೂಕು ಆರೋಗ್ಯಾಧಿಕಾರಿಗಳ ಕಚೇರಿಯಿಂದ ನಗರಸಭೆ ಪೌರಕಾರ್ಮಿಕರಿಗೆಈಡೀಸ್‌ಲಾರ್ವ ಕುರಿತು ಒಂದುದಿನದ ಕಾರ್ಯಗಾರವನ್ನು ಹಮ್ಮಿಕೊಂಡಿದ್ದು ಡೆಂಗ್ಯೂ ನಿಯಂತ್ರಣಾಧಿಕಾರಿ ಸುರೇಶ್ ಕಾರ್ಯಕ್ರಮವನ್ನು ಉದ್ಘಾಟಿಸಿದರು.



ಕಳೆದ ಹಲವಾರು ದಶಕಗಳಿಂದ ರಾಷ್ಟ್ರೀಯ ಮಟ್ಟದಲ್ಲಿ ಡೆಂಗ್ಯೂ ನಿಯಂತ್ರಣಕ್ಕೆ ಆರೋಗ್ಯ ಇಲಾಖೆ ಹಲವಾರು ರೀತಿಯ ಕಾರ್ಯಕ್ರಮಗಳನ್ನು ರೂಪಿಸಿದೆ. ಡೆಂಗ್ಯೂ ನಿಯಂತ್ರಿಸುವ ನಿಟ್ಟಿನಲ್ಲಿ ಪೌರಕಾರ್ಮಿಕರೂ ಸೇರಿದಂತೆ ಅಂಗನವಾಡಿ, ಆಶಾ ಕಾರ್ಯಕತರು, ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲಾಗುತ್ತದೆ. ಎಂತಹ ಸಂದರ್ಭದಲ್ಲೂ ಡೆಂಗ್ಯೂ ಹರಡದಂತೆ ಎಚ್ಚರಿಕೆ ವಹಿಸಲಾಗಿದೆ. ಸಾರ್ವಜನಿಕರೂ ಸಹ ಆರೋಗ್ಯ ಇಲಾಖೆಯೊಂದಿಗೆ ಕೈಜೋಡಿಸಬೇಕೆಂದರು.

ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ವೆಂಕಟೇಶ್, ನಿರೀಕ್ಷಣಾಧಿಕಾರಿಗಳಾ ಅಮೃತ್‌ರಾಜ್, ಸಂಜಯ್, ನಗರಸಭೆ ಆರೋಗ್ಯ ನಿರೀಕ್ಷಕರಾದ ಗೀತಾಕುಮಾರಿ, ಗಣೇಶ್, ಸಾಗರ್, ಭೀಮಣ್ಣ ಮುಂತಾದವರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

## ಯುವ ಕಾಂಗ್ರೆಸ್ಸಿಂದ ರಕ್ತದಾನ ಶಿಬಿರ



ಚಿತ್ರದುರ್ಗ: ಜಿಲ್ಲಾ ಯುವ ಕಾಂಗ್ರೆಸ್ ವತಿಯಿಂದ ಆಪರೇಷನ್ ಸಿಂಧೂರ ಯಶಸ್ವಿ ಮಾಡಿದ ನಮ್ಮ ಸೈನಿಕರಿಗೆ ಧನ್ಯವಾದ ಅರ್ಪಣೆಗಾಗಿ ರಕ್ತದಾನ ಶಿಬಿರವನ್ನು ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷರಾದ ಕಾರೇಹಳ್ಳಿ ಉಲ್ಲಾಸ್ ಅವರ ನೇತೃತ್ವದಲ್ಲಿ ರಕ್ತದಾನ ಶಿಬಿರವನ್ನು ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಗುರುವಾರ ಹಮ್ಮಿಕೊಳ್ಳಲಾಗಿತ್ತು ಈ ಶಿಬಿರದಲ್ಲಿ 74ಕ್ಕೆ ಹೆಚ್ಚು ಯುವಕ ರಕ್ತದಾನಿಗಳು ತಮ್ಮ ರಕ್ತವನ್ನು ದಾನ ಮಾಡಿದರು ಈ ಸಂದರ್ಭದಲ್ಲಿ ರಾಜ್ಯ ಪ್ರಧಾನ ಕಾರ್ಯದರ್ಶಿ ಸೈಯದ್ ಸಾಧಿಕ್, ರಾಜ್ಯ ಕಾರ್ಯದರ್ಶಿಗಳಾದ ವೈಶಾಖ ಯಾದವ್ ಚಿತ್ರದುರ್ಗ ವಿಧಾನಸಭಾ ಯುವ ಕಾಂಗ್ರೆಸ್‌ನ ಅಧ್ಯಕ್ಷರು ಆದರ್ಶ್ , ಪವನ್, ವೀರೇಶ್ ,ಗಿರೀಶ್ , ಧನಂಜಯ ಹಾಗೂ ಚಿತ್ರದುರ್ಗ ಗ್ರಾಮಾಂತರ ಅಧ್ಯಕ್ಷರಾದ ಮಹಾಂತೇಶ್ , ರೋಹನ್ ನಗರ ಅಧ್ಯಕ್ಷರಾದ ಪವನ್ ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿಗಳಾದ ಸಂಪತ ಕುಮಾರ್ ಮಧು ಗೌಡ ಮೈಲಾರಪ್ಪ ನರಸಿಂಹ ಹಾಗೂ ಅನೇಕ ಯುವ ಮುಖಂಡರುಗಳು ಭಾಗವಹಿಸಿದ್ದರು

## ಪ್ರಮುಖ ಸುದ್ದಿ

# ವಿದ್ಯಾರ್ಥಿಗಳ ಸರ್ವತೋಮುಖ ಅಭಿವೃದ್ದಿಗೆ ಸರ್ಕಾರಿ ಶಾಲೆಗೆ ದಾಖಲಿಸಿ: ಪ್ರವೀಣ್

» ಚಳ್ಳಕೆರೆ

ಪ್ರಸ್ತುತ ವರ್ಷದ ಶೈಕ್ಷಣಿಕ ಶಖೆ ಈ ತಿಂಗಳ 28ರಿಂದ ಆರಂಭವಾಗಲಿದ್ದು, ಈಗಾಗಲೇ ಮಕ್ಕಳನ್ನು ಶಾಲೆಗೆ ದಾಖಲಿಸಲು ಪೋಷಕರು ಸಿದ್ದತೆಗಳನ್ನು ನಡೆಸುತ್ತಿದ್ದು ಪ್ರತಿಯೊಬ್ಬರೂ ತಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗೆ ದಾಖಲಿಸಿ ಸರ್ಕಾರಿ ಸೌಲಭ್ಯಗಳನ್ನು ಪಡೆದು ಶೈಕ್ಷಣಿಕ ಅಭಿವೃದ್ಧಿಗೆ ಸಹಕಾರ ನೀಡುವಂತೆ ಸರ್ಕಾರಿ ಮಾದರಿ ಹಿರಿಯಪ್ರಾಥಮಿಕ ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷ ಪ್ರವೀಣ್ ತಿಳಿಸಿದರು.



ಅವರು, ಗುರುವಾರ ಶಾಲೆಯಲ್ಲಿ ಪೋಷಣ್ ಅಭಿಯಾನ ಕಾರ್ಯಕ್ರಮ, ಶಿಕ್ಷಣ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ನಮ್ಮ ಶಾಲೆ, ನಮ್ಮ ಜವಾಬ್ದಾರಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಇತ್ತೀಚಿನ ದಿನಗಳಲ್ಲಿ ಸರ್ಕಾರಿ ಶಾಲೆಗಳೂ ಸಹ ಶೈಕ್ಷಣಿಕ ಪ್ರಗತಿಯನ್ನು ದಾಖಲಿಸುವಲ್ಲಿ ಯಶಸ್ವಿಯಾಗಿವೆ ಎಂದರು. ನೆಲಗೇತನಹಟ್ಟಿಯ ಗಾಯಕ ಕೆ.ಟಿ.ಮುತ್ತುರಾಜ್ ಮಾತನಾಡಿ, ಸರ್ಕಾರಿ ಶಾಲೆಗಳು ವಿದ್ಯಾರ್ಥಿಗಳಪಾಲಿಗೆಜ್ಞಾನದೇಗುಲಗಳಾಗಿ ಪರಿವರ್ತನೆಯಾಗಿವೆ. ಎಲ್ಲಾ ಸರ್ಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳಿಗೆ ಸಮವಸ್ತ್ರ, ಪೆನ್ನು, ಪುಸ್ತಕ ಹಾಗೂ ಉಚಿತ ಶಿಕ್ಷಣದ ವ್ಯವಸ್ಥೆ ಇದೆ. ಬಡ, ಮಧ್ಯಮ ಕುಟುಂಬದ ಮಕ್ಕಳು ಉತ್ತಮ ಅಭ್ಯಾಸ ಪಡೆಯಲು ಸರ್ಕಾರಿ ಶಾಲೆಗಳು ಕಾರಣವಾಗಿವೆ. ಆದ್ದರಿಂದ ಪೋಷಕರು ತಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗೆ ದಾಖಲಿಸುವಂತೆ ಮನವಿ ಮಾಡಿದರು. ಅಕ್ಷರದಾಸೋಹ ಅಧಿಕಾರಿ ಮಂಜುನಾಥ, ಬಿಆರ್‌ಸಿ ತಿಪ್ಪೇಸ್ವಾಮಿ, ಸಿಆರ್‌ಪಿ ನಾಗರಾಜ, ಈಶ್ವರಪ್ಪ, ಶಾಲೆಯ ಮುಖ್ಯಶಿಕ್ಷಕ ಜಕಣಚಾರಿ, ಸಹ ಶಿಕ್ಷಕರಾದ ಕೆ.ಓ.ನಾಗೇಶ್, ಬಿ.ಸುಶೀಲಮ್ಮ, ಸಣ್ಣಪಾಪಣ್ಣ, ಕೆ.ಆರ್.ಪುಟ್ಟಸ್ವಾಮಿ, ನಾಗೇಂದ್ರಪ್ಪ, ಡಿ.ತಿಪ್ಪೇಸ್ವಾಮಿ ಪಾಲ್ಗೊಂಡಿದ್ದರು.

## ವಿ.ವಿ. ಮಟ್ಟದ ಕ್ರೀಡೆಯಲ್ಲಿ ಹೊಸದುರ್ಗದ ವಿದ್ಯಾರ್ಥಿಗಳು ಪ್ರಥಮ



ಹೊಸದುರ್ಗ: 2024-25 ನೇ ಸಾಲಿನ ದಾವಣಗೆರೆ ವಿಶ್ವವಿದ್ಯಾನಿಲಯದ ಮಹಿಳಾ ಕ್ರೀಡಾಕೂಟದಲ್ಲಿ ಹೊಸದುರ್ಗ ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ತಂಡ ವಾಲಿಬಾಲ್ ನಲ್ಲಿ ಪ್ರಥಮ ಸ್ಥಾನ, ತ್ರೋಬಾಲ್ ನಲ್ಲಿ ಪ್ರಥಮ ಸ್ಥಾನ ಮತ್ತು ಬಾಲ್ ಬ್ಯಾಡ್ಮಿಂಟನ್ ನಲ್ಲಿ ತೃತೀಯ ಸ್ಥಾನಗಳಿಸಿದ್ದಾರೆ. ಈ ವರ್ಷದ ಮಹಿಳಾ ಕ್ರೀಡಾಕೂಟದ ಸಮಗ್ರ ಪ್ರಶಸ್ತಿಯಲ್ಲಿ 2ನೇ ಸ್ಥಾನವನ್ನು ಗಳಿಸಿತ್ತು. ಕ್ರೀಡಾಪಟುಗಳಿಗೆ ಕಾಲೇಜಿನ ಪ್ರಾಚಾರ್ಯ ಡಾ.ಅಶ್ವತ್ ಯಾದವ್, ಐಕ್ಯೂಎಸಿ ಮುಖ್ಯಸ್ಥ ಸತೀಶ್, ಕ್ರೀಡಾ ಸಂಚಾಲಕ ಶೈಲೇಂದ್ರ ಮತ್ತು ದೈಹಿಕ ಶಿಕ್ಷಣ ನಿರ್ದೇಶಕ ಸತೀಶ್ ಸೇರಿದಂತೆ ಕಾಲೇಜು ಉಪನ್ಯಾಸಕರು, ಸಿಬ್ಬಂದಿಗಳು ಹಾಗೂ ಹಿರಿಯ ವಿದ್ಯಾರ್ಥಿಗಳು ಕ್ರೀಡಾಪಟುಗಳಿಗೆ ಅಭಿನಂದಿಸಿದ್ದಾರೆ.

## ಫಾಸ್ಟ್ ನ್ಯೂಸ್

### ಮೇ 18ರಂದು ವಧು-ವರರ ರಾಜ್ಯ ಮಟ್ಟದ ಸಮಾವೇಶ

» **ಚಿತ್ರದುರ್ಗ**

ಚಿತ್ರದುರ್ಗದ ಬಸವೇಶ್ವರ ವಧು ವರರ ಮಾಹಿತಿ ಕೇಂದ್ರದ ವತಿಯಿಂದ ಇದೇ ತಿಂಗಳ 18–5–2025ರ ಭಾನುವಾರ ಬೆಳಗ್ಗೆ 11 ಗಂಟೆಗೆ ಬೆಂಗಳೂರಿನ ಮಹಾರಾಷ್ಟ್ರ ಮಂಡಳ ಕುರುಬರ ಹಾಸ್ಟಲ್ ಎದುರು, ಗಾಂಧಿನಗರ ಎರಡನೇ ಮೇನ್ ಇಲ್ಲಿ ಸರ್ವಧರ್ಮೀಯರ ವಧು ವರರ ರಾಜ್ಯಮಟ್ಟದ ಸಮಾವೇಶವನ್ನು ಏರ್ಪಡಿಸಲಾಗಿದೆ ಎಂದು ಸಂಘಟಕರು ಹಾಗೂ ಸಂಚಾಲಕರಾದ ಜೆ.ಎಂ. ಜಂಬಯ್ಯ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಅಂದಿನ ಸಮಾರಂಭದ ಸಾನಿಧ್ಯವನ್ನು ಚಿತ್ರದುರ್ಗ ಸಂಸ್ಥಾನ ಖಾಸಮಠದ ಗುರುಮಠಕಲ್‌ನ ಶಾಂತವೀರ ಗುರು ಮುರುಘರಾಜೇಂದ್ರ ಮಹಾಸ್ವಾಮಿಗಳು ವಹಿಸಲಿದ್ದು, ಮುಖ್ಯ ಅತಿಥಿಗಳಾಗಿ ಕೆ.ಎಲ್.ಇ ಕಾನೂನು ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ. ಜೆ.ಎಂ.ಮಲ್ಲಿಕಾರ್ಜುನಯ್ಯ, ಭಾಗವಹಿಸಲಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ವ್ಯವಸ್ಥಾಪಕರ ಈ 9448011825,,9980658625 ಮೊಬೈಲ್ ನಂಬರ್‌ಗೆ ಸಂಪರ್ಕ ಸಂಪರ್ಕಿಸಬಹುದಾಗಿದೆ.

### ಶಾಲಾ ಆದ್ಯತೆ ನಮೂದಿಸಲು ಸೂಚನೆ

» **ಚಿತ್ರದುರ್ಗ**

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ ಹಾಗೂ ಡಾ.ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆಗಳಿಗೆ 2025–26ನೇ ಸಾಲಿನ 6ನೇ ತರಗತಿ ದಾಖಲಾತಿಗೆ ಅರ್ಜಿ ಸಲ್ಲಿಸಿ, 2025ರ ಏಪ್ರಿಲ್ 27ರಂದು ಸಾಮಾನ್ಯ ಪ್ರವೇಶ ಪರೀಕ್ಷೆ ಬರೆದಿರುವ ವಿದ್ಯಾರ್ಥಿಗಳು ಮಾತ್ರ ಶಾಲಾ ಆಧ್ಯತೆಯನ್ನು ನಮೂದಿಸಲು ಮೇ.17ರವರೆಗೆ ವೆಬ್‌ಸೈಟ್ https://dom.karnataka.gov.in ನಲ್ಲಿ ಅವಕಾಶ ಕಲ್ಪಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಂಬಂಧಪಟ್ಟ ಪ್ರಾಂಶುಪಾಲರು, ಅಲ್ಪಸಂಖ್ಯಾತರ ತಾಲ್ಲೂಕು ವಿಸ್ತರಣಾಧಿಕಾರಿಗಳು ಹಾಗೂ ಅಲ್ಪಸಂಖ್ಯಾತರ ಜಿಲ್ಲಾ, ತಾಲ್ಲೂಕು ಮಾಹಿತಿ ಕೇಂದ್ರಗಳನ್ನು ಸಂಪರ್ಕಿಸಬಹುದು.

### ಕಾರ್ಯಾಗಾರ

» **ದಾವಣಗೆರೆ**

ಲೋಕಸಭಾಸದಸ್ಯರಾದಡಾ.ಪ್ರಭಾಮಲ್ಲಿಕಾರ್ಜುನ್ ಇವರ ಉಪಸ್ಥಿತಿಯಲ್ಲಿ ಮೇ.16 ರಂದು ಬೆಳಗ್ಗೆ 10 ಕ್ಕೆ ನಗರದಲ್ಲಿರುವ ಗ್ಲಾ□□ಹೌ□□ನಲ್ಲಿ ಸಮಾಲೋಚನಾ ಸಮಾರಂಭ ಹಾಗೂ ಮಾರುಕಟ್ಟೆ ನೆರವು ಮತ್ತು ವ್ಯಾಪಾರ ಅಭಿವೃದ್ಧಿ ಕಾರ್ಯಾಗಾರವನ್ನು ಆಯೋಜಿಸಲಾಗಿದೆ ಎಂದು ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕರು ತಿಳಿಸಿದ್ದಾರೆ.

### ಅಪರೇಷನ್ ರಡಿ ಅಣುಕು ಪ್ರದರ್ಶನ

» **ದಾವಣಗೆರೆ**

ತುರ್ತು ಪರಿಸ್ಥಿತಿ ನಿಭಾಯಿಸುವ ಹಿನ್ನಲೆಯಲ್ಲಿ ಮೇ.18 ರಂದು ಸಂಜೆ 4 ರಿಂದ 7 ಗಂಟೆಯವರೆಗೆ ಮಹಾನಗರಪಾಲಿಕೆ ಆವರಣದಲ್ಲಿ ಅಪರೇಷನ್ ಅಭ್ಯಾಸ ರಡಿ ಅಣುಕು ಪ್ರದರ್ಶನವನ್ನು ಆಯೋಜಿಸಲಾಗಿದೆ. ಅಣಕು ಪ್ರದರ್ಶನದ ಪೂರ್ವಭ್ಯಾಸವನ್ನು ಮೇ.17 ರಂದು ಸಂಜೆ 4 ಗಂಟೆಗೆ ಮಹಾನಗರಪಾಲಿಕೆ ಕಾರ್ಯಾಲಯದಲ್ಲಿ ಆಯೋಜಿಸಲಾಗಿದೆ ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ ತಿಳಿಸಿದ್ದಾರೆ.

### ಜಾತಿ ಗಣತಿ ಛಲವಾದಿ ಎಂದು ಬರೆಸಲು ಮನವಿ

» **ಚಿತ್ರದುರ್ಗ**

ಸುಪ್ರೀಂಕೋರ್ಟ್ ತೀರ್ಪಿನಂತೆ ಪರಿಶಿಷ್ಟ ಜಾತಿಯಲ್ಲಿನ 101 ಉಪ ಜಾತಿಗಳಿಗೆ ಒಳ ಮೀಸಲಾತಿ ಕಲ್ಪಿಸುವುದಕ್ಕಾಗಿ ರಾಜ್ಯ ಸರ್ಕಾರ ಜಾತಿ ಗಣತಿ ಆರಂಭಿಸಿದ್ದು, ಕಡ್ಡಾಯವಾಗಿ ಛಲವಾದಿ ಎಂದು ಬರೆಸುವಂತೆ ಛಲವಾದಿ ಮಹಾಸಭಾ ಮಾಜಿ ಜಿಲ್ಲಾಧ್ಯಕ್ಷ ಹಾಗೂ ನ್ಯಾಯವಾದಿ ಹೆಚ್.ಅಣ್ಣಪ್ಪಸ್ವಾಮಿ ಮನವಿ ಮಾಡಿದ್ದಾರೆ. ಸಾಮಾಜಿಕ, ಶೈಕ್ಷಣಿಕ, ಆರ್ಥಿಕ, ರಾಜಕೀಯವಾಗಿ ವಂಚನೆಗೊಳಗಾಗಿರುವ ಪರಿಶಿಷ್ಟ ಜಾತಿಯಲ್ಲಿನ ಉಪ ಜಾತಿಗಳು ಆಯಾ ಜನಸಂಖ್ಯೆ ಗನುಗುಣವಾಗಿ ಸರ್ಕಾರದಿಂದ ಸಿಗುವ ಸೌಲಭ್ಯಗಳನ್ನು ಪಡೆಯಬೇಕಾಗಿರುವುದರಿಂದ ಗಣತಿದಾರರು ಮನೆ ಬಾಗಿಲಿಗೆ ಬಂದಾಗ ಛಲವಾದಿ ಎಂದು ನಮೂದಿಸುವಂತೆ ಹೆಚ್. ಅಣ್ಣಪ್ಪಸ್ವಾಮಿ ವಿನಂತಿಸಿದ್ದಾರೆ.

### ಹುಲಿಗೆಮ್ಮ ರಥೋತ್ಸವ

» **ಕೊಪ್ಪಳ**

ಹಿಂದು ಧಾರ್ಮಿಕ ಧರ್ಮಾದಾಯ ದತ್ತಿಗಳ ಇಲಾಖೆ ಹಾಗೂ ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಕೊಪ್ಪಳ ಜಿಲ್ಲೆಯ ಪ್ರಸಿದ್ಧ ಧಾರ್ಮಿಕ ಕ್ಷೇತ್ರವಾದ ಹುಲಿಯ ಶ್ರೀ ಹುಲಿಗೆಮ್ಮ ದೇವಿ ಜಾತ್ರಾ ಮಹೋತ್ಸವು ಮೇ 20 ರಿಂದ 24 ರವರೆಗೆ ನಡೆಯಲಿದ್ದು, ಮಹಾ ರಥೋತ್ಸವವು ಮೇ 21ರ ಸಂಜೆ 5.30ಕ್ಕೆ ಜರುಗಲಿದೆ. ಮೇ 22ರಂದು ಬಾಳಿದಂಡಿಗೆ ಆರೋಹಣ ಕಾರ್ಯಕ್ರಮ, ಏಕಾದಶಿ ಶುಕ್ರವಾರಂದು ದೇವಿಗೆ ಪಾಯಸ ಪ್ರಸಾದ ನಿವೇದನೆ ಕಾರ್ಯ, ಶನಿವಾರ ದ್ವಾದಶಿ ನಸುಕಿನಲ್ಲಿ ಅಗ್ನಿಕುಂಡ ನಡೆಯಲಿದೆ.

## ಪರಿಶಿಷ್ಟ ಜಾತಿಗಳ ಸಮಗ್ರ ಸಮೀಕ್ಷೆ – 2025

# ಎಲ್ಲಾ ವರ್ಗದವರಿಗೆ ಸಮಾನತೆ ಮತ್ತು ಸಾಮಾಜಿಕ ನ್ಯಾಯ ಒದಗಿಸುವುದು ಸರ್ಕಾರದ ಉದ್ದೇಶ

» **ಚಿತ್ರದುರ್ಗ**

ಎಲ್ಲಾ ಕಾಲದಲ್ಲಿಯೂ ಎಲ್ಲಾ ವರ್ಗದ ಸಮುದಾಯಗಳಿಗೆ ಸಮಾನತೆ ಮತ್ತು ಸಾಮಾಜಿಕ ನ್ಯಾಯ ಸರ್ಕಾರದ ಪ್ರಮುಖ ಧ್ಯೇಯವಾಗಿದೆ.

ಸಂವಿಧಾನದ 341ನೇ ವಿಧಿಯ ಅಡಿಯಲ್ಲಿ ಕರ್ನಾಟಕ ರಾಜ್ಯದ ಪರಿಶಿಷ್ಟ ಜಾತಿ ಪಟ್ಟಿಯಲ್ಲಿ 101 ಜಾತಿಗಳನ್ನು ಗುರುತಿಸಲಾಗಿರುತ್ತದೆ. ಮೀಸಲಾತಿಯ ಪ್ರಯೋಜನವು ಎಲ್ಲಾ ಜಾತಿಗಳಿಗೆ ಸಮಾನವಾಗಿ ತಲುಪುವಂತೆ ಮಾಡಲು ಪರಿಶಿಷ್ಟ ಜಾತಿಗಳ ವರ್ಗೀಕರಣಕ್ಕಾಗಿ ಹಲವಾರು ವರ್ಷಗಳಿಂದ ಬೇಡಿಕೆಯಿರುತ್ತದೆ.

ಮಾನ್ಯ ಸರ್ವೋಚ್ಚ ನ್ಯಾಯಾಲಯವು ಭಾರತದ ಸಂವಿಧಾನದ ಅನುಚ್ಛೇದ 15(4) ಮತ್ತು 16(4) ರ ಅಡಿಯಲ್ಲಿ ಶಿಕ್ಷಣ ಮತ್ತು ರಾಜ್ಯ ಸರ್ಕಾರದ ಅಧೀನದ ಸೇವೆಗಳಲ್ಲಿ ಪರಿಶಿಷ್ಟ ಜಾತಿಗಳಲ್ಲಿ ಒಳ ಮೀಸಲಾತಿಯನ್ನು ಕಲ್ಪಿಸುವ ಬಗ್ಗೆ ರಾಜ್ಯ ಸರ್ಕಾರಗಳು ಪರಿಶಿಷ್ಟ ಜಾತಿಗಳ ಒಳ ವರ್ಗೀಕರಣ ಮಾಡಬಹುದಾಗಿದೆ ಎಂದು State of Punjab and Others v/s Devinder Singh and Others ಪ್ರಕರಣದಲ್ಲಿ ದಿನಾಂಕ:01–08–2024 ರಂದು ತೀರ್ಪು ನೀಡಿರುತ್ತದೆ.

ಅದರಂತೆ, ಕರ್ನಾಟಕ ರಾಜ್ಯದಲ್ಲಿ ಶಿಕ್ಷಣ ಮತ್ತು ಸರ್ಕಾರಿ ಸೇವೆಗಳಲ್ಲಿ ಪರಿಶಿಷ್ಟ ಜಾತಿಗಳ ವಿವಿಧ ಉಪ ಗುಂಪುಗಳಲ್ಲಿ ಪ್ರಾತಿನಿಧ್ಯತೆ ಕುರಿತು ಇಟಠಿಜಡುಭಿಚಿಟ ಆಚಿಣಚಿ ಪಡೆದು ಪರಿಶಿಷ್ಟ ಜಾತಿಯಲ್ಲಿ ಒಳಮೀಸಲಾತಿ (ಉಪ ವರ್ಗೀಕರಣ) ಬಗ್ಗೆ ವರದಿ ಸಲ್ಲಿಸಲು ಕರ್ನಾಟಕ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಮೂರ್ತಿಗಳಾದ ಡಾ. ಹೆಚ್. ಎನ್. ನಾಗಮೋಹನ್ ದಾಸ್ ಇವರ ಅಧ್ಯಕ್ಷತೆಯಲ್ಲಿ ಏಕ ಸದಸ್ಯ ಆಯೋಗವನ್ನು ಸರ್ಕಾರವು ರಚಿಸಿದೆ.

ಈ ನಿಟ್ಟಿನಲ್ಲಿ ಸರ್ಕಾರವು 2024ನೇ ಡಿಸೆಂಬರ್13ರಂದುಸೂಕ್ತನಿಯಮಹಾಗೂ ಮಾರ್ಗಸೂಚಿಗಳನ್ನು ಸಹ ನಿಗದಿಪಡಿಸಿ ಆದೇಶ ಹೊರಡಿಸಲಾಗಿರುತ್ತದೆ.

ಕರ್ನಾಟಕ ರಾಜ್ಯದಲ್ಲಿ ಲಭ್ಯವಿರುವ ದತ್ತಾಂಶ ಮತ್ತು 2011ರ ಜನಗಣತಿಯನ್ನು ಪರಿಗಣಿಸಿ, ವೈಜ್ಞಾನಿಕವಾಗಿ ತರ್ಕಬದ್ಧ ಒಳ ಮೀಸಲಾತಿ (ಉಪ–ವರ್ಗೀಕರಣ) ಮತ್ತು ಪರಿಶಿಷ್ಟ ಜಾತಿಗಳಲ್ಲಿ ಸಮಾನ ಜಾತೀಯ (Homogeneous) ಉಪ–ಜಾತಿಗಳ ಗುಂಪುಗಳನ್ನು ಒಟ್ಟುಗೂಡಿಸುವ ಬಗ್ಗೆ ಪರಿಶೀಲಿಸುವುದು.

ರಾಜ್ಯದ ಸಾರ್ವಜನಿಕ ಸೇವೆಗಳಲ್ಲಿ ಮತ್ತು ಶಿಕ್ಷಣ ಸಂಸ್ಥೆಗಳ ಪ್ರವೇಶಾತಿಗಳಲ್ಲಿ ಪ್ರಾತಿನಿಧ್ಯದ ಅಸಮರ್ಪಕತೆಯನ್ನು ದೃಷ್ಟಿಯಲ್ಲಿಟ್ಟುಕೊಂಡು ಕರ್ನಾಟಕ ರಾಜ್ಯದಲ್ಲಿನ ಪರಿಶಿಷ್ಟ ಜಾತಿಗಳ ವಿವಿಧ ಉಪ ಗುಂಪುಗಳಲ್ಲಿ ಅಂತರ್ ಹಿಂದುಳಿದಿರುವಿಕೆಯನ್ನು (Inter-se backwardness) ಗುರುತಿಸಲು Empirical data ಸಂಗ್ರಹಿಸುವುದು.

ಕರ್ನಾಟಕ ರಾಜ್ಯದಲ್ಲಿನ ಪರಿಶಿಷ್ಟ ಜಾತಿಗಳ ವಿವಿಧ ಉಪ ಗುಂಪುಗಳಲ್ಲಿ ಅಂತ□□ಹಿಂದುಳಿದಿರುವಿಕ□ (Inter-se backwardness) ಹಾಗೂ ಪ್ರಾತಿನಿಧ್ಯತೆಯ ಆಧಾರದ ಮೇಲೆ ಸೂಕ್ತ ಒಳ ಮೀಸಲಾತಿ (ಉಪ–ವರ್ಗೀಕರಣ) ಮಾಡುವ ಬಗ್ಗೆ ಮಾನ್ಯ ಸರ್ವೋಚ್ಚ ನ್ಯಾಯಾಲಯದಆದೇಶದಂತೆಮೀಸಲಾತಿ ಪ್ರಮಾಣವನ್ನು ನಿಗದಿಪಡಿಸುವ ಬಗ್ಗೆ ಪರಿಶೀಲಿಸುವುದು.

ಆಯೋಗವು ಅಗತ್ಯವಿದ್ದಲ್ಲಿ ತನ್ನ ವಿವೇಚನೆಯಂತೆ ಮತ್ತು ಅಂತರ್ ಹಿಂದುಳಿದಿರುವಿಕೆಯ ಬಗ್ಗೆ ಇನ್ನಿತರ ಸೂಕ್ತ ದತ್ತಾಂಶಗಳು (Empirical data) ಲಭ್ಯವಿದ್ದಲ್ಲಿ ಸಂಗ್ರಹಿಸಬಹುದು.

### ಸಮೀಕ್ಷಾ ಪ್ರಕ್ರಿಯಾ ವಿಧಾನ

ಪ್ರಶ್ನಾವಳಿಗಳನ್ನು ಗೌರವಾನ್ವಿತ ನ್ಯಾಯಮೂರ್ತಿ ಡಾ.ಹೆಚ್. ಎನ್.ನಾಗಮೋಹನದಾಸ್ ಏಕ ಸದಸ್ಯ ವಿಚಾರಣಾ ಆಯೋಗವು ಸಿದ್ದಪಡಿಸಿದ್ದು ಈ ಪ್ರಶ್ನಾವಳಿಯನ್ನು ಇಆಅಖ ಇ–ಗವರ್ನೆನ್ಸ್ ಇಲಾಖೆಯವರು ಆಂಡ್ರಾಯ್ಡ್ ಮೊಬೈಲ್ ಆಪ್ ಮೂಲಕ ಮಾಹಿತಿಯನ್ನು ಸಂಗ್ರಹಿಸಲು ತಂತ್ರಜ್ಞಾನವನ್ನು ಅಭಿವೃದ್ಧಿಗೊಳಿಸಿರುತ್ತಾರೆ. ಸಮೀಕ್ಷೆಯನ್ನು BLO Model ನಂತೆ ಜಿಲ್ಲೆಗಳ ಜಿಲ್ಲಾಧಿಕಾರಿಗಳು 58932 ಪ್ರಮುಖವಾಗಿ ಶಿಕ್ಷಕರನ್ನು ಸಮೀಕ್ಷಾದಾರರಾಗಿ (Enumerators) ನೇಮಿಸಿ ಆದೇಶ ಹೊರಡಿಸಿರುತ್ತಾರೆ. ಪ್ರತಿ 10–12 ಸಮೀಕ್ಷೆದಾರರಿಗೆ (Enumerators) ಒಬ್ಬರು ಮೇಲ್ವಿಚಾರಕರನ್ನು ನೇಮಿಸಲಾಗಿದೆ. ಸದರಿ ಸಮೀಕ್ಷೆದಾರರು (Enumerators) ಮನೆ–ಮನೆಗೆ ತೆರಳಿ Android Mobile App ನಲ್ಲಿ ಅಳವಡಿಸಿರುವ ತಂತ್ರಜ್ಞಾನದ ಮೂಲಕ ಸಮೀಕ್ಷೆಯನ್ನು ನಡೆಸುವ ಸಂದರ್ಭದಲ್ಲಿ ಸಮೀಕ್ಷಾದಾರರಿಗೆ, ಪ.ಜಾತಿ ಜನಾಂಗದವರು ತಮ್ಮ ಜಾತಿ/ಮೂಲ ಜಾತಿ/ಶಿಕ್ಷಣ/ಉದ್ಯೋಗ/ರಾಜಕೀಯ/ಸಾಮಾಜಿಕ ಹಾಗೂ ಆರ್ಥಿಕ ಇತ್ಯಾದಿ ಮಾಹಿತಿಯನ್ನು ನೀಡಿ ಸಮೀಕ್ಷೆಗೆ ಸಹಕರಿಸುವುದು ಬಹಳ ಮುಖ್ಯವಾಗಿರುತ್ತದೆ. ಇದರಿಂದ ಅವರಿಗೆ ಮುಂದೆ ಒಳ ಮೀಸಲಾತಿ ಪ್ರಯೋಜನೆಯನ್ನು ಪಡೆಯುವಲ್ಲಿ ಸಹಾಯಕವಾಗುತ್ತದೆ.

2025ನೇ ಏಪ್ರಿಲ್ 9ರ ಸರ್ಕಾರದ ಆದೇಶದಲ್ಲಿ ರಾಜ್ಯ/ಜಿಲ್ಲಾ/ತಾಲ್ಲೂಕು ಮಟ್ಟದ ಹಾಗೂ ಬಿಬಿಎಂಪಿ ವ್ಯಾಪ್ತಿಯಲ್ಲಿ ಪರಿಶಿಷ್ಟ ಜಾತಿ ಒಳ ಮೀಸಲಾತಿ ವರ್ಗೀಕರಣ ಕುರಿತು ಸಮೀಕ್ಷೆ ಕೈಗೊಳ್ಳುವ ಸಂಬಂಧ ಸಮನ್ವಯ ಸಮಿತಿಗಳನ್ನು ರಚಿಸಿ ಇವುಗಳ ಮೇಲುಸ್ತುವಾರಿಯಲ್ಲಿ ಈ ಕೆಳಕಂಡ ಮೂರು ಹಂತಗಳಲ್ಲಿ ಸಮೀಕ್ಷೆಯನ್ನು ಕೈಗೊಳ್ಳಲು ಉದ್ದೇಶಿಸಲಾಗಿದೆ.



ಪರಿಶಿಷ್ಟ ಜಾತಿಯೊಳಗಿನ ವಿವಿಧ ಉಪ ಗುಂಪುಗಳ ಸಾಮಾಜಿಕ, ಆರ್ಥಿಕ, ರಾಜಕೀಯ ಮತ್ತು ಶೈಕ್ಷಣಿಕ ಹಿಂದುಳಿದಿರುವಿಕೆಯ ವಿವಿಧ ಸಮಸ್ಯೆಗಳನ್ನು ಪರಿಶೀಲಿಸುವ ಬಗ್ಗೆ ಮತ್ತು ಮಾನ್ಯ ಸರ್ವೋಚ್ಚ ನ್ಯಾಯಾಲಯವು (ಪಂಜಾಬ್ ರಾಜ್ಯ ಮತ್ತು ಇತರರ ವಿರುದ್ಧ ದೇವಿಂದರ್ ಸಿಂಗ್ ಮತ್ತು ಇತರರು ಸಿವಿಲ್ ಮೇಲ್ಮನವಿ ಸಂಖ್ಯೆ: 2317/2011ರ ದಿನಾಂಕ:01–08–2024ರ ಪ್ರಕರಣದಲ್ಲಿ) ನೀಡಿರುವ ತೀರ್ಪಿನ ಅನ್ವಯ ಕರ್ನಾಟಕ ರಾಜ್ಯದಲ್ಲಿ ಪರಿಶಿಷ್ಟ ಜಾತಿಗಳ ಒಳ ಮೀಸಲಾತಿಯ (ಉಪ–ವರ್ಗೀಕರಣ) ಬಗ್ಗೆ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ವಿಧಾನ ಬಗ್ಗೆ ಪರಿಶೀಲಿಸುವುದು.

ಮೀಸಲಾತಿ ನೀತಿಗಳ ಪ್ರಯೋಜನವನ್ನು ಪರಿಶಿಷ್ಟ ಜಾತಿಗಳ ವಿವಿಧ ಉಪ ಗುಂಪುಗಳ ನಡುವೆ ಸಮಾನವಾಗಿ ಪಡೆಯಲಾಗುತ್ತಿದೆಯೇ ಎಂಬುದರ ಬಗ್ಗೆ ಪರಿಶೀಲಿಸುವುದು ಮತ್ತು ಮೇಲ್ಕಂಡ ಎಲ್ಲಾ ಅಂಶಗಳ ಬಗ್ಗೆ ಕೈಗೊಳ್ಳಬಹುದಾದ ಇತರ ಕ್ರಮಗಳ ಕುರಿತು ನಿರ್ದಿಷ್ಟ ಶಿಫಾರಸ್ಸುಗಳೊಂದಿಗೆ ವರದಿಯನ್ನು ಸಲ್ಲಿಸುವುದು.

ದಿನಾಂಕ: 04–01–2025 ರಿಂದ 26–03–2025 ರವರೆಗೂ ಒಳಮೀಸಲಾತಿಯ ಬಗ್ಗೆ ಒಟ್ಟು 4034 ಅಹವಾಲುಗಳು/ಮನವಿಗಳ (ಇ–ಮೇಲ್/ಮುದ್ದಾಂ/ಅಂಚೆ ಮೂಲಕ) ಹಾಗೂ ಸಲಹೆಗಳನ್ನು ಆಯೋಗವು ಸ್ವೀಕರಿಸಿದ್ದು, ಸದರಿ ಮನವಿ/ ಅಹವಾಲುಗಳನ್ನು ಹಾಗೂ ದಾಖಲಾತಿಗಳನ್ನು ಪರಿಶೀಲಿಸಿ ಗೌರವಾನ್ವಿತ ನ್ಯಾಯಮೂರ್ತಿ ಡಾ.ಹೆಚ್. ಎನ್.ನಾಗಮೋಹನದಾಸ್ ಏಕ ಸದಸ್ಯ ವಿಚಾರಣಾ ಆಯೋಗವು ದಿನಾಂಕ: 27–03–2025 ರಂದು ಸರ್ಕಾರಕ್ಕೆ ಸಲ್ಲಿಸಿರುವ ಮಧ್ಯಂತರ ವರದಿಯಲ್ಲಿ, ಪರಿಶಿಷ್ಟ ಜಾತಿಯಲ್ಲಿನ 101 ಜಾತಿಗಳ ವೈಜ್ಞಾನಿಕ ವರ್ಗೀಕರಣ ಮಾಡಲು ದತ್ತಾಂಶವನ್ನು (Emperical Data) ಸಂಗ್ರಹಣೆಗೆ ಸಮೀಕ್ಷೆಯನ್ನು ನಡೆಸಲು ಶಿಫಾರಸ್ಸು ಮಾಡಿರುತ್ತದೆ. ಅದರಂತೆ ವೈಜ್ಞಾನಿಕ ದತ್ತಾಂಶ ಸಂಗ್ರಹಣೆಗೆ ಸಮೀಕ್ಷೆ ನಡೆಸಲು ಉದ್ದೇಶಿಸಲಾಗಿರುತ್ತದೆ.

2011ರ ಜನಗಣತಿಯಲ್ಲಿ ಆದಿ ಕರ್ನಾಟಕ, ಆದಿ ದ್ರಾವಿಡ, ಆದಿ ಆಂಧ್ರ ಎಂದು ನಮೂದಿಸಿರುವ ಜಾತಿಗಳ ಮೂಲಜಾತಿಗಳ ಸಂಖ್ಯೆಯ ಮಾಹಿತಿ ಇಲ್ಲದೆ ಇರುವುದರಿಂದ ಮಾದಿಗ ಸಂಬಂಧಿತ ಜಾತಿಗಳ ಸಂಖ್ಯೆ ಮತ್ತು ಹೊಲೆಯ ಸಂಬಂಧಿತ ಜಾತಿಗಳ ಸಂಖ್ಯೆಯನ್ನು ವರ್ಗೀಕರಿಸಲು ಸಾಧ್ಯವಾಗಿರುವುದಿಲ್ಲ.

ಪರಿಶಿಷ್ಟಜಾತಿಗಳ ಬಗ್ಗೆ ನಮೂದಿಸಿರುವ ಜನಸಂಖ್ಯೆಯನ್ನು ಒಳಮೀಸಲಾತಿಯ ವರ್ಗೀಕರಣದಲ್ಲಿ ಯಾವ ಗುಂಪಿಗೆ ಸೇರಿಸಬೇಕು ಎಂಬುವದರ ಬಗ್ಗೆ ಯಾವ ವರದಿಯಲ್ಲೂ ಉಲ್ಲೇಖವಿಲ್ಲ ಮತ್ತು ಈ ಸಮುದಾಯವನ್ನು ವರ್ಗೀಕರಣದಲ್ಲಿ ಪರಿಗಣಿಸಿಲ್ಲ. 2011ರ ಜನಗಣತಿಯಲ್ಲಿ ಇವರ ಉಪಜಾತಿಗಳ ವಿವರಗಳು ಲಭ್ಯವಿಲ್ಲ ಆದ್ದರಿಂದ ಹೊಸ ಸಮೀಕ್ಷೆಯನ್ನು ಕೈಗೊಂಡು ಇವರ ಮೂಲಜಾತಿಗಳನ್ನು ದಾಖಲಿಸಿಕೊಂಡು ಒಳಮೀಸಲಾತಿ ವರ್ಗೀಕರಣವನ್ನು ಮಾಡಬೇಕೆಂದು ಆಯೋಗವು ಶಿಫಾರಸ್ಸು ಮಾಡಿರುತ್ತದೆ.

ಸಮೀಕ್ಷೆಯಲ್ಲಿ ಗಮನಿಸಬೇಕಾದ ಅಂಶ: ಆದಿ ಕರ್ನಾಟಕ ಆದಿ, ದ್ರಾವಿಡ ಮತ್ತು ಆದಿ ಆಂಧ್ರ ಎಂದು ಸಮೀಕ್ಷಾ ಸಮಯದಲ್ಲಿ ನಮೂದಿಸಿರುವ ಎಲ್ಲರೂ ತಮ್ಮ ತಮ್ಮ ಮೂಲ ಜಾತಿಗಳನ್ನು ನಮೂದಿಸಬೇಕೆಂದು ತಿಳಿಸಬೇಕಾಗಿದೆ. ಇದು ಸಮೀಕ್ಷೆಯ ಒಂದು ಮುಖ್ಯ ಉದ್ದೇಶವಾಗಿರುತ್ತದೆ.

ಮೊಬೈಲ್ ಆ□□ನ್ನು ಬಳಸುತ್ತಿರುವ ಉದ್ದೇಶಹಾಗೂಇ–ಆಡಳಿತಇಲಾಖೆಯು ಅಭಿವೃದ್ಧಿಪಡಿಸಿರುವ ತಂತ್ರಾಂಶದಲ್ಲಿ ಮಾಹಿತಿ ಸಂಗ್ರಹಿಸುತ್ತಿರುವುದರಿಂದ ಇರುವ ಅನುಕೂಲಗಳು*:

ಮಾಹಿತಿಯನ್ನು ನಿಖರವಾಗಿ ಸಂಗ್ರಹಿಸಬಹುದು. ಸಂಗ್ರಹಿಸಿರುವ ಮಾಹಿತಿಯನ್ನು ಅಧಿಕೃತವಾಗಿ ಪರಿಶೀಲಿಸಿ ಅಂತಿಮಗೊಳಿಸುವುದು. ವೈಜ್ಞಾನಿಕವಾದ ದತ್ತಾಂಶಗಳನ್ನು ಸಂಗ್ರಹಿಸಬಹುದು. ಈಗಾಗಲೇ ಇರುವ ದತ್ತಾಂಶಗಳನ್ನು ಬಳಸಿಕೊಂಡು ಸಮೀಕ್ಷೆಯನ್ನು ಕೈಗೊಳ್ಳಬಹುದು (ಕುಟುಂಬ, ಆಧಾರ್), ಕಡಿಮೆ ಕಾಲಾವಕಾಶ ತೆಗೆದು ಕೊಂಡು ಸಮಗ್ರ ಮಾಹಿತಿಯನ್ನು ಸಂಗ್ರಹಿಸಲಾಗುವುದು. ಸಂಗ್ರಹಿಸಿದ ಮಾಹಿತಿಯನ್ನು ವಿವಿಧ ಹಂತಗಳಲ್ಲಿ ಪರಿಶೀಲಿಸಿ ಪರೀಕ್ಷಿಸಿ ಅಂತಿಮಗೊಳಿಸಬಹುದು

ಸಂಗ್ರಹಿಸಿರುವ ಮಾಹಿತಿಯ ವರ್ಗೀಕರಣ ಮತ್ತು ವಿಶ್ಲೇಷಣೆ ಸ್ಪಷ್ಟವಾಗಿರುತ್ತದೆ ಮತ್ತು ಕಡಿಮೆ ಕಾಲಾವಧಿಯಲ್ಲಿ ವರ್ಗೀಕರಿಸಲು ಸಾಧ್ಯವಾಗುತ್ತದೆ. ಮುಂದಿನ ದಿನಗಳಲ್ಲಿ ಯೋಜನೆಗಳನ್ನುರೂಪಿಸಲು ಮತ್ತು ಜನರ ಅಗತ್ಯಗಳನ್ನು ಅರ್ಥ ಮಾಡಿಕೊಳ್ಳಲು ಇದು ಸಹಾಯವಾಗುತ್ತದೆ. ಸಂಗ್ರಹಿಸುವ ಮಾಹಿತಿ ಸಂಕ್ಷಿಪ್ತವಾಗಿರಬೇಕು. ನಿರ್ದಿಷ್ಟವಾಗಿರಬೇಕು. ಅವಶ್ಯಕತೆ ಇರುವ ಮಾಹಿತಿಯನ್ನು ಮಾತ್ರ ಸಂಗ್ರಹಿಸಬೇಕು.

ಏಕಕಾಲದಲ್ಲಿ ಸಮೀಕ್ಷೆಯನ್ನು ಪ್ರಾರಂಭಿಸಿ, ನಿರ್ದಿಷ್ಟ ಕಾಲಮಿತಿಯಲ್ಲಿ ಪೂರ್ಣಗೊಳಿಸಬಹುದು. ಮಾಹಿತಿಯನ್ನು ಸಂಗ್ರಹಿಸಲು ನೇಮಿಸುವ ಮಾಹಿತಿ ಸಮೀಕ್ಷಾದಾರರಿಗೆ ರಾಜ್ಯ ಮಟ್ಟದಲ್ಲಿ, ಜಿಲ್ಲಾ ಮಟ್ಟದಲ್ಲಿ, ತಾಲೂಕು ಮಟ್ಟದಲ್ಲಿ, ಗ್ರಾಮ ಪಂಚಾಯಿತಿ ಮಟ್ಟದಲ್ಲಿ, ವಾರ್ಡ್ ಮಟ್ಟದಲ್ಲಿ ತರಬೇತಿಗಳನ್ನು ಆಯೋಜಿಸಲಾಗುತ್ತದೆ.

ಈ ಸಮೀಕ್ಷೆಯ ಉದ್ದೇಶ, ಹಾಗೂ ಈ ತಂತ್ರಾಂಶವನ್ನು ಬಳಸುವ ವಿಧಾನವನ್ನು ಕುರಿತು ತರಬೇತಿ ನೀಡಿ ಸಮಗ್ರವಾದ ಮಾಹಿತಿಯನ್ನು ಸಂಗ್ರಹಿಸುವಂತೆ ಮತ್ತು ಸಂಗ್ರಹಿಸಬೇಕಾದಂತಹ ಮಾಹಿತಿಯ ಕುರಿತು ಜನರಿಗೆ ಮನವರಿಕೆ ಮಾಡಿಕೊಟ್ಟು ಮಾಹಿತಿಯನ್ನು ಸಂಗ್ರಹಿಸಲು ತರಬೇತಿಯನ್ನು ನೀಡಲಾಗುತ್ತಿದೆ.

- **ಮೊದಲನೇ ಹಂತ:** ದಿನಾಂಕ: 05.05.2025 ರಿಂದ 17.05.2025 ರವರೆಗೆ ಮನೆ □ ಮನೆ ಸಮೀಕ್ಷೆ ಕೈಗೊಳ್ಳಲಾಗುತ್ತಿದೆ.
- **ಎರಡನೇ ಹಂತ:** ದಿನಾಂಕ: 19.05.2025 ರಿಂದ 21.05.2025 ರವರೆಗೆ ವಿಶೇಷ ಶಿಬಿರಗಳಲ್ಲಿ ಸಮೀಕ್ಷೆ ಹಮ್ಮಿಕೊಳ್ಳಲಾಗಿದೆ.
- **ಮೂರನೇ ಹಂತ:** ದಿನಾಂಕ: 19.05.2025 ರಿಂದ 23.05.2025 ರವರೆಗೆ ಆ□□ಲೈನ್ ಮೂಲಕ ಸ್ವಯಂ ಘೋಷಣೆಗೆ ಅವಕಾಶ ಕಲ್ಪಿಸಲಾಗಿರುತ್ತದೆ. ಸಮೀಕ್ಷೆಗೆ ಸುಮಾರು 25 ಲಕ್ಷ ಪರಿಶಿಷ್ಟ ಜಾತಿ ಕುಟುಂಬಗಳು ಇರಬಹುದೆಂದು ಅಂದಾಜಿಸಲಾಗಿದೆ.

ಸಮೀಕ್ಷೆಯ ಉದ್ದೇಶಕ್ಕಾಗಿ ಈಗಾಗಲೇ ಜಿಲ್ಲಾ ಮಟ್ಟದ ಮಾಸ್ಟರ್ ಟ್ರೈನರ್ ಗಳನ್ನು ಗುರುತಿಸಿ ದಿನಾಂಕ: 25.04.2025 ರಂದು ರಾಜ್ಯ ಮಟ್ಟದಿಂದ ತರಬೇತಿ ನೀಡಲಾಗಿರುತ್ತದೆ. ಹಾಗೂ ತಾಲ್ಲೂಕು ಮಟ್ಟದ ಮಾಸ್ಟರ್ ಟ್ರೈನರ್ ಗಳಿಗೆ ಜಿಲ್ಲಾ ಮಟ್ಟದಲ್ಲಿ ದಿನಾಂಕ: 28.04.2025 ರಂದು ತರಬೇತಿ ನೀಡಲಾಗಿರುತ್ತದೆ.

ಸಮೀಕ್ಷೆಗೆ ನೇಮಕವಾಗಿರುವ ಸುಮಾರು 65,000 ಗಣತಿದಾರರು ಮತ್ತು ಮೇಲ್ವಿಚಾರಕರಿಗೆ ಸಮೀಕ್ಷೆಯ ಕುರಿತು ದಿನಾಂಕ: 02.05.2025 ಮತ್ತು 03.05.2025 ರಂದು ತಾಲ್ಲೂಕು ಮಟ್ಟದಲ್ಲಿ ತರಬೇತಿಯನ್ನು ನೀಡಲಾಗಿರುತ್ತದೆ. ಮತ್ತು ಎಲ್ಲಾ ಸಮೀಕ್ಷಾದಾರರಿಗೆ ಸಮೀಕ್ಷಾ ಕೈಪಿಡಿ ಮತ್ತು ಸಮೀಕ್ಷಾ ಕಿ□□ಗಳನ್ನು ಒದಗಿಸಲು ಕ್ರಮವಹಿಸಲಾಗುತ್ತಿದೆ.

ಮಾಹಿತಿಯನ್ನು ವೈಜ್ಞಾನಿಕವಾಗಿ ಕಡಿಮೆ ಅವಧಿಯಲ್ಲಿ ಪಡೆಯುವ ಉದ್ದೇಶದಿಂದ ಇ–ಆಡಳಿತ ಇಲಾಖೆಯು ಅಭಿವೃದ್ಧಿ ಪಡಿಸಿರುವ ಅಂಡ್ರಾಯಿಡ್ ಆಧಾರಿತ ಮೊಬೈಲ್ ಆಪ್ ಮೂಲಕ ಸಮೀಕ್ಷೆಯನ್ನು ಕೈಗೊಳ್ಳಲಾಗುತ್ತಿದೆ.

ಸಮೀಕ್ಷೆ ನಡೆಸುವ ಎಲ್ಲಾ ಗಣತಿದಾರರ ಮೊಬೈಲ್ ಸಂಖ್ಯೆಗಳನ್ನು ಅಂಡ್ರಾಯಿಡ್ ಆಧಾರಿತ ಮೊಬೈಲ್ ಆಪ್ ಮುಖಾಂತರ ವೈ□□ಲಿಸ್ಟಿಂಗ್ ಮಾಡಲಾಗಿದ್ದು, ಈ ಮೊಬೈಲ್ ನಂಬ□□ಗಳನ್ನು ಹೊರತುಪಡಿಸಿ ಇತರೆ ಮೊಬೈಲ್ ನಂಬರ್ ಮುಖೇನ ಸಮೀಕ್ಷೆಯನ್ನು ಕೈಗೊಳ್ಳಲು ಸಾಧ್ಯವಾಗುವುದಿಲ್ಲ, ಇದರಿಂದಾಗಿ ಸಮೀಕ್ಷೆಯನ್ನು ಪಾರದರ್ಶಕವಾಗಿ ಹಮ್ಮಿಕೊಳ್ಳಲು ಸಾಧ್ಯವಾಗುತ್ತದೆ.

ಸಮೀಕ್ಷೆಯಲ್ಲಿ ಕುಟುಂಬ ತಂತ್ರಾಂಶ 'ದಿಂದ ಡಾಟಾಬೇಸ್ (ಪಡಿತರ ಚೀಟಿ) ನಲ್ಲಿರುವ ದತ್ತಾಂಶಗಳನ್ನು ಬಳಸಿಕೊಂಡು ಮಾಹಿತಿ ಸಂಗ್ರಹಿಸುತ್ತಿರುವುದರಿಂದ, ವೈಜ್ಞಾನಿಕವಾದ ದತ್ತಾಂಶಗಳನ್ನು ಪಡೆಯಲು ಸಹಕಾರಿಯಾಗಿದೆ.

ಮೊಬೈಲ್ ಆ□□ನಲ್ಲಿರುವ ಸಮೀಕ್ಷಾ ಪ್ರಶ್ನಾವಳಿಯಲ್ಲಿ 42 ಪ್ರಶ್ನೆಗಳಿದ್ದು, ಇದರಲ್ಲಿ ಕೌಟುಂಬಿಕ, ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ಮತ್ತು ಔದ್ಯೋಗಿಕ ವಿಷಯಗಳನ್ನೊಳಗೊಂಡಂತೆ ಸಮಗ್ರವಾದ ಮಾಹಿತಿಯನ್ನು ಸಂಗ್ರಹಿಸಲಾಗುತ್ತಿದೆ.

ಈ ಮಾಹಿತಿಯು ಪರಿಶಿಷ್ಟ ಜಾತಿ ಪಟ್ಟಿಯಲ್ಲಿನ ವಿವಿಧ ಜಾತಿಗಳ ಸ್ಥಿತಿಗತಿ ಮತ್ತು ವಿವಿಧ ಕ್ಷೇತ್ರಗಳಲ್ಲಿನ ಪ್ರಾತಿನಿಧ್ಯತೆ ಬಗ್ಗೆ ದತ್ತಾಂಶವನ್ನು ನೀಡುತ್ತದೆ.

ಇದರಿಂದಾಗಿ ವೈಜ್ಞಾನಿಕವಾಗಿ ಪರಿಶಿಷ್ಟ ಜಾತಿಗಳ ಒಳ ಮೀಸಲಾತಿಯ ವರ್ಗೀಕರಣಕ್ಕಾಗಿ ಅನುಕೂಲಕರವಾಗಲಿದೆ.

ಸಮೀಕ್ಷೆಯನ್ನು ಕೈಗೊಳ್ಳಲು ಮೈಬೈಲ್ ಆಪ್ ಬೆಳಿಗ್ಗೆ 6:30 ರಿಂದ ಸಂಜೆ 6:30 ರವರೆಗೆ ಎನೇಬಲ್ (ಜಟಿಚಿಭಜಟಜಜ) ಮಾಡಲಾಗಿರುತ್ತದೆ. ಸದರಿ ಅವಧಿಯಲ್ಲಿ ಗಣತಿದಾರರು ಮನೆಗಳಿಗೆ ಭೇಟಿ ನೀಡಲಿದ್ದು, ಸಾರ್ವಜನಿಕರು/ಕುಟುಂಬದವರು ತಮ್ಮ ಜಾತಿಯ ಕುರಿತು ಮಾಹಿತಿಯನ್ನು ನೀಡಲು ಸಹಕರಿಸಿ ಸಮೀಕ್ಷೆ ಕಾರ್ಯವನ್ನು ಯಶಸ್ವಿಗೊಳಿಸಲು ಹಾಗೂ ಮನೆ–ಮನೆ ಸಮೀಕ್ಷೆ ಕೈಗೊಂಡ ಸಂದರ್ಭದಲ್ಲಿ ಮಾಹಿತಿ ಒದಗಿಸಲು ಸಾಧ್ಯವಾಗದೇ ಇರುವ ಪರಿಶಿಷ್ಟ ಜಾತಿಯ ಕುಟುಂಬದವರು ಸ್ವಯಂಪ್ರೇರಿತವಾಗಿ ವಿಶೇಷ ಶಿಬಿರಗಳಲ್ಲಿ ಭಾಗವಹಿಸಿ ಮಾಹಿತಿಯನ್ನು ಒದಗಿಸಬಹುದಾಗಿದೆ.

**ಸಹಾಯವಾಣಿ:**ಜಿಲ್ಲಾಮಟ್ಟದಸಹಾಯವಾಣಿ ಸ್ಥಾಪಿಸತಕ್ಕದ್ದು, ನಗರ ಪ್ರದೇಶದಲ್ಲಿ ಇ–ಆಡಳಿತ ಇಲಾಖೆಯ ಡಿ.ಪಿ.ಎಂ ಗಳ ಸಹಾಯವಾಣಿಯನ್ನು ಸ್ಥಾಪಿಸಬೇಕು ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಆರ್.ಡಿ.ಪಿ.ಆರ್. ಸಹಾಯವಾಣಿಯನ್ನು ಬಳಸಬಹುದು. ಇದರಲ್ಲಿ ಎಫ್.ಎ.ಕ್ಯೂ ಗಳನ್ನು ತಯಾರಿಸಲಾಗುವುದು ಹಾಗೂ ಎಫ್.ಎ.ಕ್ಯೂ ಗಳಲ್ಲಿರುವ ಪ್ರಶ್ನೆಗಳಿಗೆ ಮಾತ್ರ ಉತ್ತರ ನೀಡಲಾಗುವುದು.

ರಾಜ್ಯ ಮಟ್ಟದ ಸಹಾಯವಾಣಿ ಸಂಖ್ಯೆ: 9481359000 ಈ ಸಹಾಯವಾಣಿ ಈಗಾಗಲೇ ಚಾಲ್ತಿಯಲ್ಲಿರುತ್ತದೆ. ಇದಲ್ಲದೆ ಇತರೆ ಯಾವುದೇ ಸಂದೇಹಗಳಿದ್ದಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ ಅಥವಾ ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ರವರನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ

## ಪ್ರಮುಖ ಸುದ್ದಿ

# ಕೋಟಿ ವೆಚ್ಚದ ದೇವಸ್ಥಾನ ನಿರ್ಮಾಣಕ್ಕೆ ಸಿದ್ದೇಶ್ವರ ಶ್ರೀ ಮೊದಲ ದೇಣಿಗೆ

» **ಹರಪನಹಳ್ಳಿ**

ನನ್ನಿಂದಲೇ ಈ ದೇವಸ್ಥಾನ ನಿರ್ಮಾಣಕ್ಕೆ ಮೊದಲ ದೇಣಿಗೆ ಶುರುವಾಗಲಿ,ಶ್ರೀ ದುರ್ಗಾಂಭಿಕ ದೇವಿ ದೇವಸ್ಥಾನ ಬಹಳ ಪ್ರಸಿದ್ಧ ಇದ್ದು, ಇದನ್ನು ನಾನು ಬಹಳ ವರ್ಷಗಳಿಂದ ನೋಡುತ್ತಾ ಬಂದಿದ್ದೇನೆ, ಇಂತಹ ದೇವಾನು ದೇವತೆಗಳ ದೇವಸ್ಥಾನದನಿರ್ಮಾಣಕ್ಕೆನಾನುಅಡಿಗಲ್ಲು ಪೂಜೆ ನೆರವೇರಿಸುವುದಕ್ಕೆ ಬಹಳ ಸಂತಸ ತಂದಿದೆ ಎಂದು ರಾಮಘಟ್ಟ ಮಠದ ಶ್ರೀ ರೇವಣ ಸಿದ್ದೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ತಿಳಿಸಿದರು.

ತಾಲ್ಲೂಕಿನ ಅರಸೀಕೆರೆ ಸಮೀಪದ ಕೆರೆಗುಡಿಹಳ್ಳಿ ಗ್ರಾಮದಲ್ಲಿ ನೂತನವಾಗಿ ನಿರ್ಮಾಣವಾಗುತ್ತಿರುವ ಶ್ರೀ ದುರ್ಗಂಭಿಕ ದೇವಿ, ತಿಮ್ಮಪ್ಪ ಸ್ವಾಮಿಯ ದೇವಸ್ಥಾನದ ಅಡಿಗಲ್ಲು ಪೂಜೆ ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದ ಶ್ರೀ ರೇವಣ ಸಿದ್ದೇಶ್ವರಶಿವಾಚಾರ್ಯಮಹಾಸ್ವಾಮಿಗಳು ಗುಡಿಹಳ್ಳಿ ಗೆ ಉತ್ತಮವಾದ ಮಳೆ, ಬೆಳೆ ಮೂಲಕ ಸಮಸ್ತ ಊರಿನ ಸರ್ವರಿಗೂ



ಆಯುಷ್ಯ ಅರೋಗ್ಯವಾಗಿರಲಿ ಎಂದು ಆಶೀರ್ವಾದಿಸಿದರು.

ಇನ್ನೂ ದೇವಸ್ಥಾನದ ನಿರ್ಮಾಣಕ್ಕೆ ಮೊದಲ ದೇಣಿಗೆ ನೀಡಿದ ಶ್ರೀಗಳು ಈ ಮೂಲಕ ಎಲ್ಲಾ ಭಕ್ತರ ದೇಣಿಗೆ ಮೂಲಕ ಒಂದು ನೂತನವಾದ ದೇವಸ್ಥಾನ ಈ ಊರಿನಲ್ಲಿ ನಿರ್ಮಾಣವಾದರೆ ಅದೇ ನನಗೆ ನೀವು ತೋರಿಸುವ ಗೌರವ ಎಂದು ತಿಳಿಸಿದರು.

ಈ ನೂತನ ದೇವಸ್ಥಾನ ಸರಿ ಸುಮಾರು 1.5ಕೋಟಿ ರೂಪಾಯಿಗಳ ಅಂದಾಜು ಮೊತ್ತದಲ್ಲಿ ನಿರ್ಮಾಣವಾಗುತ್ತಿದೆ, ಈ ಮೂಲಕ ಸರಕಾರದ ಅನುದಾನದ ಜೊತೆಗೆ ಭಕ್ತರ ದೇಣಿಗೆ ಅತ್ಯಗತ್ಯ ಸಹಕಾರ ನೀಡುತ್ತದೆ, ಆದರಿಂದ್ದ ಒಂದು ಮಾದರಿ ದೇವಸ್ಥಾನ ನಿರ್ಮಾಣ ಮಾಡಬೇಕು, ಇದು ಒಂದು ಪವಿತ್ರ ಕ್ಷೇತ್ರವಾಗಬೇಕು ಎಂದು ತಿಳಿಸಿದರು. ಇದೇ ಸಂದರ್ಭದಲ್ಲಿ ಊರಿನ ಸರ್ವರೂ ನೂತನ ಅಡಿಗಲ್ಲಿಗೆ ವಿಧಿವಿಧಾನಗಳ ಮೂಲಕ ನೈವೇದ್ಯದೊಂದಿಗೆ ಪೂಜೆಯನ್ನ ನೆರವೇರಿಸಿದರು.

ಈ ವೇಳೆ ಊರಿನ ಮುಖಂಡರಾದ ಸಿ.ಶಿವಣ್ಣ, ಪೂಜಾರ್ ತಿಮ್ಮಣ್ಣ, ಅರಕೇರಿ ದುರುಗಪ್ಪ, ಪಿ. ಎಸ್.ವಿರೇಶ, ಕೆಂಗಪ್ಪರ ಹನುಮಂತಪ್ಪ, ಗುಂಡಗತ್ತಿ ನಾಗರಾಜ್, ಪಾಲ್ಲಾಗಟ್ಟೆ ದುರುಗಪ್ಪ, ಪತ್ರಕರ್ತ ಗುಡಿಹಳ್ಳಿ ಮಂಜುನಾಥ್, ಬಡಿಗೇರ್ ದುರುಗಪ್ಪ, ಬಕ್ಕಲಾಡಿ ನಾಗಪ್ಪ, ಪೂಜಾರಿ ದೊಡ್ಡ ದುರುಗಪ್ಪ, ಯು. ಎಂ. ವೀರಯ್ಯ, ಶಿವನಾಗಣ್ಣ,ಹೊನ್ನೇನಹಳ್ಳಿ ಚಂದ್ರಪ್ಪ,ಸಿ. ಹೆಚ್. ಹನುಮಂತಪ್ಪ, ಕೆ. ನಾಗರಾಜ್ ಹಾಗೂ ಹಾಲುಮತದ ಭಾಂದವರು, ಪಂಚಮಸಾಲಿ ಸಮಾಜದ ಭಾಂದವರು ಸೇರಿದಂತ್ತೆ ಊರಿನ ಸರ್ವ ಗ್ರಾಮಸ್ಥರು ಹಾಜರಿದ್ದರು.

## ಫಾಸ್ಟ್ ನ್ಯೂಸ್

### 6ನೇ ತರಗತಿ ಪ್ರವೇಶಕ್ಕಾಗಿ ಅರ್ಜಿ

» **ಚಿತ್ರದುರ್ಗ**

2025-26ನೇ ಸಾಲಿನಲ್ಲಿ 6ನೇ ತರಗತಿ ಪ್ರವೇಶಕ್ಕಾಗಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮೌಲಾನಾ ಆಜಾದ್ ಮಾದರಿ ಶಾಲೆಗಳಿಗೆ ಅಲ್ಪಸಂಖ್ಯಾತರ ಸಮುದಾಯದವರಾದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್, ಪಾರ್ಸಿ ಮತ್ತು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಇತರೆ ಹಿಂದುಳಿದ ವರ್ಗಗಳ ಅರ್ಹ ವಿದ್ಯಾರ್ಥಿಗಳು ಅರ್ಜಿಯನ್ನು ಆನ್‌ಲೈನ್‌ನಲ್ಲಿ ಸೇವಾಸಿಂಧು ತಂತ್ರಾಂಶದ ಮೂಲಕ ಸಲ್ಲಿಸಬಹುದಾಗಿರುತ್ತದೆ. ಮೇ.30 ಅರ್ಜಿ ಸಲ್ಲಿಸಲು ಕೊನೆಯ ದಿನ. ಹೆಚ್ಚಿನ ಮಾಹಿತಿಗಾಗಿ ಹತ್ತಿರದ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಶಾಲೆಗಳು ಹಾಗೂ ಅಲ್ಪಸಂಖ್ಯಾತರ ಜಿಲ್ಲಾ, ತಾಲ್ಲೂಕು ಮಾಹಿತಿ ಕೇಂದ್ರಗಳನ್ನು ಸಂಪರ್ಕಿಸಬಹುದು. ಸೇವಾಸಿಂಧು ವೆಬ್‌ಸೈಟ್ https://sevasindhu.karnataka.gov.in ನಲ್ಲಿ ಅರ್ಜಿಯನ್ನು ಸಲ್ಲಿಸುವಂತೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿಗಳು ತಿಳಿಸಿದ್ದಾರೆ.

### ನಮ್ಮ ಮೆಟ್ರೋದಲ್ಲಿ ಮಾಜಿ ಸೈನಿಕರಿಗೆ ನೌಕರಿ

» **ಚಿತ್ರದುರ್ಗ**

ಬೆಂಗಳೂರು ಮೆಟ್ರೋ ರೈಲ್ ಕಾರ್ಪೋರೇಶನ್ ಲಿಮಿಟೆಡ್ ಅವರು 150 ಮೆಂಟೇನರ್ ಹುದ್ದೆಗಳಿಗಾಗಿ ಐ.ಟಿ.ಐ ಅಥವಾ ಎನ್.ಸಿ.ವಿ.ಟಿ/ಎನ್.ಸಿ.ಟಿ.ವಿ.ಟಿ/ಎನ್.ಎ.ಸಿ ಗೆ ತತ್ಸಮಾನ ವಿದ್ಯಾರ್ಹತೆ ಹೊಂದಿರುವ ಮತ್ತು 50 ವರ್ಷದ ಒಳಗಿನ ಅರ್ಹ ಮಾಜಿ ಸೈನಿಕರಿಂದ ಅರ್ಜಿ ಆಹ್ವಾನಿಸಲಾಗಿದೆ. ಮೇ.22 ಅರ್ಜಿ ಸಲ್ಲಿಸಲು ಕೊನೆಯದಿನ.ವೇತನ25000-59060(ವಾರ್ಷಿಕ ಬಡ್ತಿ ಶೇ.3%) ಮತ್ತು ಬಿ.ಎಮ್.ಆರ್.ಸಿ.ಎಲ್ ನ, ಒ ಮತ್ತು ಎಮ್ ವಿಂಗ್‌ಗೆ ಲಭ್ಯವಿರುವ ಇತರೆ ಭತ್ಯೆಗಳು, ಹುದ್ದೆಗಳು 05 ವರ್ಷಗಳ ಅವಧಿಗೆ ಗುತ್ತಿಗೆ ಆಧಾರವಾಗಿದ್ದು, ನಂತರ ವೈಯಕ್ತಿಕ ಕಾರ್ಯಕ್ಷಮತೆಗೆ ಅನುಗುಣವಾಗಿ ಗುತ್ತಿಗೆ ಅವಧಿಯನ್ನು ವಿಸ್ತರಿಸಲಾಗುವುದು, ಅರ್ಜಿಯನ್ನು ವೆಬ್‌ಸೈಟ್ www.bmrc.co.in./careers ನಲ್ಲಿ ಸಲ್ಲಿಸಬಹುದಾಗಿದೆ. ಹೆಚ್ಚಿನ ವಿವರಗಳಿಗೆ e-mail (helpdesk@bmrc.co.in) ಸಂಪರ್ಕಿಸಬಹುದು.

### ಬಿ ಖಾತಾ ಪಡೆಯಲು ಅವಧಿ ವಿಸ್ತರಣೆ

» **ಚಿತ್ರದುರ್ಗ**

ಕರ್ನಾಟಕ ಪೌರಸಭೆಗಳ ಅಧಿನಿಯಮ 1964 ಪ್ರಕರಣ 110 ರ ಅನ್ವಯ ಎ ರಿಜಿಸ್ಟರ್‌ನಲ್ಲಿ ಅಂದರೆ ಸಕ್ಷಮ ಪ್ರಾಧಿಕಾರದಿಂದ ಅನುಮೋದನೆ ಪಡೆಯಲಾದ ಬಡಾವಣೆಯಲ್ಲಿನ ಸ್ವತ್ತುಗಳಿಗೆ ಇ-ಖಾತಾನೀಡಲಾಗುತ್ತದೆ.ಆದರೆ,ಭೂಪರಿವರ್ತನೆ ಆಗದೇ ಉಪ-ವಿಭಜನೆ ಮಾಡಿ ನಿವೇಶನಗಳಾಗಿ ಮಾರಾಟ ಮಾಡಿರುವ ನಿವೇಶನ/ಕಟ್ಟಡಗಳು ಮತ್ತು ಭೂ ಪರಿವರ್ತನೆಯಾಗಿದ್ದು, ಆದರೆ ಸಕ್ಷಮ ಪ್ರಾಧಿಕಾರದಿಂದ ಅನುಮೋದನೆಯಾಗದ ಬಡಾವಣೆಗಳಲ್ಲಿನ ನಿವೇಶನ/ಕಟ್ಟಡಗಳಿಗೆ ಬಿ ರಿಜಿಸ್ಟರ್‌ನಲ್ಲಿ ನಮೂದಿಸಿಕೊಂಡು ಇ-ಖಾತಾ ನೀಡಲಾಗುತ್ತದೆ. ಈ ಅವಕಾಶವನ್ನು ಒಮ್ಮೆ ಮಾತ್ರ ನೀಡಲಾಗುತ್ತಿದೆ. ಬಿ ರಿಜಿಸ್ಟರ್‌ನಲ್ಲಿ ದಾಖಲಿಸುವ ಆಸ್ತಿಗಳಿಗೆ 2024-25ನೇ ಸಾಲಿಗೆ ಮೊದಲ ಬಾರಿಗೆ ಸ್ವತ್ತು ತೆರಿಗೆಯ 2 ರಷ್ಟು ತೆರಿಗೆಯನ್ನು ವಿಧಿಸಲಾಗುತ್ತದೆ. ತದನಂತರದ ವರ್ಷಗಳಲ್ಲಿ ಸ್ವತ್ತು ತೆರಿಗೆಯನ್ನು ಮಾತ್ರ ವಿಧಿಸಲಾಗುತ್ತದೆ. ಬಿ ರಿಜಿಸ್ಟರ್‌ನಲ್ಲಿ ಸರ್ಕಾರಿ ಜಾಗದಲ್ಲಿರುವ ಸ್ವತ್ತುಗಳು/ಸರ್ಕಾರದ ನಿಗಮ ಮಂಡಳಿಗಳ ಜಾಗಗಳು/ನಗರ ಸ್ಥಳೀಯ ಸಂಸ್ಥೆಗಳಲ್ಲಿನ ಜಾಗಗಳು ಹೊರತುಪಡಿಸಿ ದಿನಾಂಕ:10.09.2024 ರ ಪೂರ್ವಕ್ಕೆ ನೋಂದಾಯಿತವಾದ ಭೂ ಪರಿವರ್ತನೆ ಆಗದೇ ಉಪ ವಿಭಜನೆ ಮಾಡಿ ನಿವೇಶನಗಳಾಗಿ ಮಾರಾಟ ಮಾಡಿರುವ ನಿವೇಶನ/ಕಟ್ಟಡಗಳು ಮತ್ತು ಭೂ ಪರಿವರ್ತನೆಯಾಗಿ ಸಕ್ಷಮ ಪ್ರಾಧಿಕಾರದಿಂದ ಅನುಮೋದನೆಯಾಗದ ಬಡಾವಣೆಗಳಲ್ಲಿನ ನಿವೇಶನ/ಕಟ್ಟಡಗಳಿಗೆ ಬಿ ರಿಜಿಸ್ಟರ್‌ನಲ್ಲಿ ನಮೂದಿಸಿಕೊಂಡು ಇ-ಖಾತಾ ನೀಡಲಾಗುತ್ತದೆ. ಆದುದರಿಂದ ಇದುವರೆಗೆ ಇ-ಖಾತಾ ಪಡೆಯದ ಅಂತಹ ಎಲ್ಲಾ ಸ್ವತ್ತುಗಳ ಮಾಲೀಕರು ಕೂಡಲೇ ನಗರಸಭೆ/ಪುರಸಭೆ/ಪಟ್ಟಣ ಪಂಚಾಯಿತಿ ಕಛೇರಿಗಳಿಗೆ ಭೇಟಿ ನೀಡಿ ಅಥವಾ ಸಹಾಯವಾಣಿ ಸಂಪರ್ಕಿಸಿ ಬಿ ರಿಜಿಸ್ಟರ್‌ನಲ್ಲಿ ಇ-ಖಾತಾ ಪಡೆಯಲು ಅರ್ಜಿ ಸಲ್ಲಿಸಿ ಸರ್ಕಾರ ನೀಡಿರುವ ಅವಕಾಶವನ್ನು ಸದುಪಯೋಗ ಪಡಿಸಿಕೊಳ್ಳಬೇಕು. ಬಿ ಖಾತಾ ಪಡೆಯಲು ಈ ಹಿಂದೆನೀಡಿದ್ದಅಂತಿಮದಿನಾಂಕ:10.05.2025ನ್ನು ವಿಸ್ತರಿಸಿದ್ದು, ಸಾರ್ವಜನಿಕರು ಈ ಅವಕಾಶವನ್ನು ಉಪಯೋಗಿಸಿಕೊಂಡು ಶೀಘ್ರವಾಗಿ ಇ-ಖಾತಾ ಪಡೆದುಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ.

### ತಾ.ಪಂ.ಸಾಮಾನ್ಯ ಸಭೆ

» **ಚಿತ್ರದುರ್ಗ**

ಚಿತ್ರದುರ್ಗ ತಾಲ್ಲೂಕು ಪಂಚಾಯತ್ ಸಾಮಾನ್ಯ ಸಭೆಯನ್ನು ಇದೇ ಮೇ.26ರಂದು ಬೆಳಿಗ್ಗೆ 10.30ಕ್ಕೆ ನಗರದ ತಾಲ್ಲೂಕು ಪಂಚಾಯತ್ ಸಭಾಂಗಣದಲ್ಲಿ ಆಯೋಜಿಸಲಾಗಿದೆ. ತಾಲ್ಲೂಕು ಪಂಚಾಯಿತಿ ಆಡಳಿತಾಧಿಕಾರಿ ಬಿ.ಆನಂದ್ ಅವರು ಸಭೆಯ ಅಧ್ಯಕ್ಷತೆ ವಹಿಸುವರು.

**ಹೊಸದುರ್ಗದಲ್ಲಿ ಮದಕರಿನಾಯಕರ ಪುಣ್ಯಸ್ಮರಣೆ; ಕಾರ್ಯಕ್ರಮದಲ್ಲಿ ತಿಪ್ಪೇಸ್ವಾಮಿ ಒತ್ತಾಯ**

# ಮದಕರಿನಾಯಕರ ಥೀಮ್ ಪಾರ್ಕ್ ಮಾಡಿ

» **ಹೊಸದುರ್ಗ**

ದುರ್ಗ ಎಂದರೆ ಮದಕರಿ ನಾಯಕರು, ಮದಕರಿ ನಾಯಕರು ಎಂದರೆ ದುರ್ಗ ಎನ್ನುವಷ್ಟರ ಮಟ್ಟಿಗೆ ಖ್ಯಾತಿಯಾಗಿದೆ. ರಾಜ ವೀರ ಮದಕರಿ ನಾಯಕರು ಚಿತ್ರದುರ್ಗ ಮಾತ್ರವಲ್ಲದೇ ಕನ್ನಡ ನಾಡಿನ ಜನರ ಅಸ್ಮಿತೆಯಾಗಿದ್ದಾರೆ. ಇಂತಹ ಮಹಾನ್ ಪುರುಷನ ಹೆಸರಿನಲ್ಲಿ ಚಿತ್ರದುರ್ಗ ನಗರದಲ್ಲಿ ಥೀಮ್ ಪಾರ್ಕ್ ಮಾಡುತ್ತೇವೆಂದು ಹೇಳಿದ್ದ ಕೇಂದ್ರ ಗೃಹ ಸಚಿವ ಅಮಿತ್ ಶಾ ಮಾತು ತಪ್ಪಿದ್ದಾರೆ. ಕೇಂದ್ರ ಸರ್ಕಾರ ಈಗಲಾದರೂ ಮದಕರಿ ನಾಯಕರ ಥೀಮ್ ಪಾರ್ಕ್ ಮಾಡುವ ಕೆಲಸಕ್ಕೆ ಮುಂದಾಗಲಿ ಎಂದು ಹೊಸದುರ್ಗ ತಾಲ್ಲೂಕು ನಾಯಕ ಸಮಾಜದ ಉಪಾಧ್ಯಕ್ಷ ಎನ್. ತಿಪ್ಪೇಸ್ವಾಮಿ ಒತ್ತಾಯಿಸಿದರು.

ಪಟ್ಟಣದ ಮದಕರಿ ಸರ್ಕಲ್ ನಲ್ಲಿ ಗುರುವಾರ ಗಂಡುಗಲಿ ರಾಜ ವೀರ ಮದಕರಿ ನಾಯಕರ ಪುಣ್ಯಸ್ಮರಣೆಯ ನಿಮಿತ್ತವಾಗಿ ಮದಕರಿ ನಾಯಕರ ಪುತ್ಥಳಿಗೆ ಮಾಲಾರ್ಪಣೆ ಮಾಡಿ ಮಾತನಾಡಿದರು.

ಚಿತ್ರದುರ್ಗದ ನಾಯಕರಲ್ಲಿ ಕಡೆಯ ನಾಯಕನಾಗಿದ್ದ ಮದಕರಿ ನಾಯಕ, ಚಿತ್ರದುರ್ಗದ ಸಿಂಹಾಸನವನ್ನು ಅಲಂಕರಿಸಿದಾಗ12ವಯಸ್ಸಿನವನಾಗಿದ್ದನು. ಅತಿ ಚಿಕ್ಕ ವಯಸ್ಸಿಗೆ ಚಿತ್ರದುರ್ಗ ಸಂಸ್ಥಾನವನ್ನು ಆಳಿದ ಕೀರ್ತಿ ಇವರಗಿದೆ. ದುರ್ಗದ ವೈರಿಗಳು ಕೋಟೆಗಳನ್ನು ವಶಪಡಿಸಿಕೊಳ್ಳಲು ಪ್ರಯತ್ನಿಸಿದಾಗ ಬೇಡ ಸಮುದಾಯ ತಮ್ಮ ನಾಯಕನಿಗೆ ನಿಷ್ಠರಾಗಿ ಉಳಿದು, ಆತನನ್ನು ರಕ್ಷಿಸುತ್ತಾರೆ. ಮದಕರಿ ನಾಯಕರಂತೆ ಅವರ ಜೊತೆಗಿದ್ದ ಸೈನ್ಯವೂ



ಕೂಡ ಎದುರಾಳಿಗಳ ಎದೆ ನಡಗಿಸುತ್ತಿತ್ತು. ತ.ರ.ಸು ರವರು ತಮ್ಮ "ದುರ್ಗಾಸ್ತಮಾನ" ಕಾದಂಬರಿಯಲ್ಲಿ ದುರ್ಗದ ಐತಿಹಾಸಿಕ ಘಟನೆಗಳನ್ನು ಕಣ್ಣಿಗೆ ಕಟ್ಟಿಕೊಡುವ ಪ್ರಯತ್ನ ಮಾಡಿದ್ದಾರೆ ಎಂದು ಸ್ಮರಿಸಿಕೊಂಡರು.

ಮುಖಂಡ ತುಂಬಿನಕೆರೆ ಬಸವರಾಜ್ ಮಾತನಾಡಿ, ಶೌರ್ಯ ಮತ್ತು ಧೈರ್ಯಕ್ಕೆ ಹೆಸರಾಗಿದ್ದ ಮದಕರಿ ನಾಯಕರು ಹೊಸದುರ್ಗ ತಾಲೂಕಿನಲ್ಲಿ ಜನಿಸಿದ್ದರು ಎಂಬುವುದೇ ಹೆಮ್ಮೆಯ ವಿಷಯ. ಹಿಂದೆ ನಾಯಕರು ತಮ್ಮ ಪ್ರಜೆಗಳ ರಕ್ಷಣೆಗಾಗಿ ಖಡ್ಗ ಹಿಡಿದು ಯುದ್ಧ ಮಾಡುತ್ತಿದ್ದರು. ಆದರಿಂದು ಖಡ್ಗ ಹಿಡಿಯುವ ಅವಶ್ಯಕತೆಯಿಲ್ಲ.

ನಮ್ಮ ಮಕ್ಕಳು ಪೆನ್ನು ಹಿಡಿದು ಪರೀಕ್ಷೆಯಲ್ಲಿ ಯುದ್ಧ ಮಾಡಿ, ಗೆದ್ದು ಬರುವಂತೆ ನಾವೆಲ್ಲರೂ ಅವರಿಗೆ ಪ್ರೋತ್ಸಾಹ ನೀಡಬೇಕಿದೆ ಎಂದರು. ಈ ವೇಳೆ ತಾಲ್ಲೂಕು ನಾಯಕ ಸಮಾಜದ ಕಾರ್ಯದರ್ಶಿ ವೆಂಗಳಾಪುರ ರಂಗನಾಥ್, ಖಜಾಂಚಿ ಹುಣವಿನಡು ಜಯಣ್ಣ, ಜಿ.ಪಂ. ಮಾಜಿ ಉಪಾಧ್ಯಕ್ಷೆ ವಿಜಯಲಕ್ಷ್ಮಿ ಪ್ರಕಾಶ್, ಮುಖಂಡರಾದ ಗುತ್ತಿಕಟ್ಟೆ ಕೆಂಚಪ್ಪ, ರೊಪ್ಪ ಹನುಮಂತಪ್ಪ, ಹೇರೂರು ರಂಗಪ್ಪ, ಮಳಲಿ ತಿಪ್ಪೇರುದ್ರಪ್ಪ, ರಂಗಾಪುರ ಶೇಖರಪ್ಪ, ಸೋಡರನಾಳು ಶಿವರುದ್ರಪ್ಪ, ಬೋಕಿಕೆರೆ ಏಕಾಂತಪ್ಪ, ಕೊಂಡಜ್ಜಿ ಮಹೇಶ್, ಮಳಲಿ ವಿಜಯ್ ಕುಮಾರ್, ಯುವ ಮುಖಂಡರಾದ ಅರುಣ್ ಗಂಗಾಧರಪ್ಪ, ಹುಣವಿನಡು ಶಿವರಾಜ್, ಕೋಡಿಹಳ್ಳಿ ಯುವರಾಜ್, ಕರ್ಣ ಪಾಳೇಗಾರ್ ಮತ್ತು ಮನು ಸೇರಿದಂತೆ ಇತರಿದ್ದರು.

### ರಂಗನಾಥ್‌ಗೆ ಭಾವಪೂರ್ಣ ಶ್ರದ್ಧಾಂಜಲಿ

ಇತ್ತೀಚೆಗಷ್ಟೇ, ನಿಧನರಾದ ತಾಲೂಕು ನಾಯಕ ಸಮಾಜದ ಅಧ್ಯಕ್ಷರಾಗಿದ್ದ ಕೆ.ಟಿ.ರಂಗನಾಥ್ ರವರ ಭಾವಚಿತ್ರಕ್ಕೆ ಶ್ರದ್ಧಾಂಜಲಿ ಸಲ್ಲಿಸಿ, ಆತ್ಮಕ್ಕೆ ಶಾಂತಿ ಕೋರಲಾಯಿತು. ದಿವಂಗತ ರಂಗನಾಥ್‌ಅವರುಅಧ್ಯಕ್ಷರಾದಮೇಲೆ ಸಮುದಾಯದ ಸಂಘಟನೆಯಲ್ಲಿ ತಮ್ಮನ್ನು ತಾವು ನಿರಂತರವಾಗಿ ತೊಡಗಿಸಿಕೊಂಡಿದ್ದರು. ಮದಕರಿ ನಾಯಕರ ಪುತ್ಥಳಿ, ವಾಲ್ಮೀಕಿ ಸಮುದಾಯ ಭವನಗಳ ಅಭಿವೃದ್ಧಿ, ವಾಲ್ಮೀಕಿ ಪ್ರತಿಭಾ ಪುರಸ್ಕಾರ ಹೀಗೆ ಹಲವಾರು ಸಮಾಜಮುಖಿ ಕಾರ್ಯಗಳನ್ನು ಕೈಗೊಂಡಿದ್ದರು. ಅವರ ದೇಹ ಇಂದು ನಮ್ಮೊಂದಿಗಿಲ್ಲ. ಆದರೆ, ಅವರ ಕೆಲಸ ಮತ್ತು ಸಾಧನೆ ಶಾಶ್ವತವಾಗಿ ಉಳಿದಿದೆ ಎಂದು ಸೇರಿದ್ದ ಮುಖಂಡರೆಲ್ಲರೂ ಸ್ಮರಿಸಿಕೊಂಡರು.

# ಜೂನ್ ತಿಂಗಳಲ್ಲಿ ಚಳ್ಳಕೆರೆಗೆ ಸಿದ್ದರಾಮಯ್ಯ ಆಗಮನ

» **ಚಳ್ಳಕೆರೆ**

ಜೂನ್ ತಿಂಗಳಲ್ಲಿ ಚಳ್ಳಕೆರೆಗೆ ಮುಖ್ಯಮಂತ್ರಿ ಎಸ್.ಸಿದ್ದರಾಮಯ್ಯ, ಡಿ.ಕೆ.ಶಿವಕುಮಾರ್ ಆಗಮಿಸಿ ವಿವಿಧ ಕಾಮಗಾರಿಗಳ ಉದ್ಘಾಟನೆ ಮಾಡಲಿದ್ದಾರೆ. ಅಧಿಕಾರಿಗಳು ಮೇ.31ರೊಳಗೆ ಎಲ್ಲಾ ಕಾಮಗಾರಿಗಳನ್ನು ಪೂರ್ಣಗೊಳಿಸಿ ಎಂದು ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ದಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು. ಕಳೆದ 2013ರಿಂದ18ರ ಅವಧಿಯಲ್ಲಿ ಮುಖ್ಯಮಂತ್ರಿ ಎಸ್.ಸಿದ್ದರಾಮಯ್ಯ ಆಡಳಿತದಲ್ಲಿ ಪ್ರಾರಂಭಗೊಂಡಿದ್ದ ಮಿನಿವಿಧಾನಸೌಧ, ಡಾ.ಬಿ.ಆರ್.ಅಂಬೇಡ್ಕರ್ ಭವನ, ವಾಲ್ಮೀಕಿ ಭವನ, ಯಾದವ ಭವನ, ಬಂಜಾರಭವನ, ಬೋವಿಭವನ, ಗಂಗಾಕಲ್ಯಾಣ ಕಾರ್ಯಯೋಜನೆ ಮುಂತಾದ ಕಾರ್ಯಕ್ರಮಗಳ ಉದ್ಘಾಟನೆಗೆ ಜೂನ್ ಮಾಹೆಯಲ್ಲಿ ಮುಖ್ಯಮಂತ್ರಿ ಎಸ್.ಸಿದ್ದರಾಮಯ್ಯ, ಡಿ.ಕೆ.ಶಿವಕುಮಾರ್‌ರವರನ್ನು ಆಹ್ವಾನಿಸಲಾಗುವುದು ಎಂದರು.

ಹೆಚ್ಚುವರಿ ಜಿಲ್ಲಾಧಿಕಾರಿ ಕೆ.ಕುಮಾರ್, ಜಿಲ್ಲಾ ಆಡಳಿತದೊಂದಿಗೆ ಈಗಾಗಲೇ ಕ್ಷೇತ್ರದಿಂದ ಅನೇಕ ಗ್ರಾಮಗಳ ಸ್ಮಶಾನಕ್ಕೆ ಅವಶ್ಯವಿರುವ ಭೂಮಿಯನ್ನು ಸರ್ಕಾರ ಮಂಜೂರು ಮಾಡಿದೆ.



ಆದರೆ, ಕೆಲವು ವ್ಯಕ್ತಿಗಳು ಮಂಜೂರಾದ ಸರ್ಕಾರದ ಭೂಮಿಯನ್ನು ಕಾನೂನು ವ್ಯಾಪ್ತಿ ಮೀರಿ ಬಳಸಿಕೊಳ್ಳುತ್ತಿರುವುದು ಕಂಡುಬಂದಿದೆ. ತಹಶೀಲ್ದಾರ್ ಕಂದಾಯಾಧಿಕಾರಿ ಮತ್ತು ಗ್ರಾಮ ಲೆಕ್ಕಾಧಿಕಾರಿಗಳು ಕೂಡಲೇ ಸ್ಥಳಕ್ಕೆ ತೆರಳಿ ತೆರವುಗೊಳಿಸಬೇಕು. ಇಲ್ಲವಾದರಲ್ಲಿ ಕಾನೂನು ಕ್ರಮ ಕೈಗೊಳ್ಳಲಾಗುವುದು, ಪೊಲೀಸರ ಸಹಕಾರವನ್ನು ಜಿಲ್ಲಾಡಳಿತ ನೀಡುವುದು ಎಂದರು.

ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿ ತಿಮ್ಮಪ್ಪ ಮಾತನಾಡಿ, ಕುಡಿಯುವ ನೀರೂ ಸೇರಿದಂತೆ ಹಲವಾರು ಮೂಲಭೂತ ಸೌಕರ್ಯ ಒದಗಿಸಲು ಜಿಲ್ಲಾ ಪಂಚಾಯಿತಿ ಆಡಳಿತ ಸಿದ್ದವಿದೆ. ಈಗಾಗಲೇ ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಹಣಾಧಿಕಾರಿಗಳು ಸೂಚನೆ ನೀಡಿ ಎನ್‌ಆರ್‌ಇಜಿ ಕಾಮಗಾರಿಯೂ ಸೇರಿದಂತೆ ಅಗತ್ಯ ಕಾಮಗಾರಿಗಳನ್ನು ಕೈಗೊಳ್ಳಲು ಅವಕಾಶ ನೀಡಿದ್ದಾರೆ. ಯಾವುದೇ ಸಮಸ್ಯೆ ಇದ್ದರೂ ಇಒ ಮೂಲಕ ಗಮನಕ್ಕೆ ತನ್ನಿ ಎಂದರು. ಚಳ್ಳಕೆರೆ ತಹಶೀಲ್ದಾರ್ ರೇಹಾನ್‌ಪಾಷ, ಚಿತ್ರದುರ್ಗ ತಹಶೀಲ್ದಾರ್ ಬಿ.ಎಂ.ಗೋವಿಂದರಾಜು, ಗ್ರೇಡ್-2ತಹಶೀಲ್ದಾರ್ ಜಿ.ಆರ್.ಮುನಿವೆಂಕಟಪ್ಪ, ಇಒ ಎಚ್.ಶಶಿಧರ, ಚಿತ್ರದುರ್ಗ ಇಒ ರವಿಕುಮಾರ್, ನಗರಸಭೆ ಪೌರಾಯುಕ್ತ ಜಗರೆಡ್ಡಿ, ತಾಲ್ಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ಗದ್ದಿಗೆತಿಪ್ಪೇಸ್ವಾಮಿ, ಕೆಡಿಪಿ ಸದಸ್ಯರಾದ ಅಂಗಡಿರಮೇಶ್, ಚೌಳೂರುಬಸವರಾಜು, ಸುರೇಶ್‌ಕುಮಾರ್, ಎಸ್.ಆರ್.ನೇತ್ರಾವತಿ, ಜಾಕೀರ್‌ಹುಸೇನ್, ಎಸ್.ಬಿ.ವಿಶ್ವನಾಥರೆಡ್ಡಿ ಮುಂತಾದವರು ಭಾಗವಹಿಸಿದ್ದರು.

## ಬಾಲಕಿಯರ ಸರ್ಕಾರಿ ಪಿಯು ಕಾಲೇಜು: ಪಿಯುಸಿ ಪ್ರವೇಶ ಆರಂಭ

» **ಚಿತ್ರದುರ್ಗ**

ಚಿತ್ರದುರ್ಗ ನಗರದ ಬಾಲಕಿಯರ ಸರ್ಕಾರಿ ಪಿಯು ಕಾಲೇಜಿನಲ್ಲಿ 2025-26ನೇ ಸಾಲಿಗೆ ಪ್ರಥಮ ಮತ್ತು ದ್ವಿತೀಯ ಪಿಯುಸಿಗೆ ಪ್ರವೇಶ ಆರಂಭವಾಗಿದೆ. ಕಾಲೇಜಿನಲ್ಲಿ ಕಲಾ ವಿಭಾಗದಲ್ಲಿ ಹೆಚ್‌ಇಪಿಎಸ್, ವಾಣಿಜ್ಯ ವಿಭಾಗದಲ್ಲಿ ಹೆಚ್‌ಇಬಿಎ , ಇಬಿಎಸಿಎಸ್ , ಇಬಿಎಎಸ್ ಹಾಗೂ ವಿಜ್ಞಾನ ವಿಭಾಗದಲ್ಲಿ ಪಿಸಿಎಂಬಿ ಪಿಸಿಎಂಸಿಎಸ್ ಸಂಯೋಜನೆಗಳಿವೆ. ಭಾಷಾ ವಿಷಯಗಳಾದ ಕನ್ನಡ , ಇಂಗ್ಲೀಷ್, ಹಿಂದಿ, ಉರ್ದು ಮತ್ತು ಸಂಸ್ಕೃತ ಇವೆ. ಕಾಲೇಜಿನಲ್ಲಿ ನುರಿತ ಮತ್ತು ಅನುಭವಿ ಪ್ರಾಚಾರ್ಯರು ಹಾಗೂ ಉಪನ್ಯಾಸಕರ ವೃಂದವಿದೆ. ಚಿತ್ರದುರ್ಗ ನಗರದ ಹೃದಯ ಭಾಗದಲ್ಲಿರುವ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜು 1972ರಲ್ಲಿ ಆರಂಭವಾಗಿ ಜಿಲ್ಲೆಯ ಪ್ರತಿಷ್ಠಿತ ಕಾಲೇಜುಗಳಲ್ಲಿ ಒಂದಾಗಿದೆ. ಈ ಕಾಲೇಜಿನಲ್ಲಿ ವ್ಯಾಸಂಗ ಮಾಡಿದ ವಿದ್ಯಾರ್ಥಿಗಳು ರಾಜಕೀಯ, ಸಾಹಿತ್ಯ, ಸಾಂಸ್ಕೃತಿಕ, ಶೈಕ್ಷಣಿಕ, ಸಾಮಾಜಿಕ, ವೈದ್ಯಕೀಯ, ಇಂಜಿನಿಯರಿಂಗ್ ಹಾಗೂ ದೇಶ-ವಿದೇಶಗಳಲ್ಲಿ ಮಹೋನ್ನತ ಅಧಿಕಾರಿಗಳಾಗಿ ಗಣನೀಯ ಸೇವೆ ಸಲ್ಲಿಸುತ್ತಿದ್ದಾರೆ.ಎನ್.ಎಸ್.ಎಸ್ ಘಟಕ, ಎನ್.ಸಿ.ಸಿ ಘಟಕ ಹಾಗೂ ಸ್ಕೌಟ್ಸ್ ಮತ್ತು ಗೈಡ್ಸ್ ಜೊತೆಗೆ ಕ್ರೀಡಾ ಮತ್ತು ಸಾಂಸ್ಕೃತಿಕ ಚಟುವಟಿಕೆ ಸೇರಿ ಸುಸಜ್ಜಿತ ಕಟ್ಟಡ, ವಿಶಾಲ ತರಗತಿ ಕೊಠಡಿಗಳು, ಶುದ್ಧ ಕುಡಿಯುವ ನೀರು, ಆಟದ ಮೈದಾನ, ಶೌಚಾಲಯ, ವಾಚನಾಲಯ, ಪ್ರಯೋಗಾಲಯ, ಗ್ರಂಥಾಲಯ, ಹಾಗೂ ಕಂಪ್ಯೂಟರ್ ಲ್ಯಾಬ್ ಸೇರಿ ಮೂಲಭೂತ ಸೌಲಭ್ಯಗಳನ್ನು ಹೊಂದಿದೆ. ಈ ಕಾಲೇಜಿನಲ್ಲಿ ಪ್ರವೇಶ ಪಡೆದ ಎಲ್ಲಾ ವಿದ್ಯಾರ್ಥಿಗಳಿಗೆ ಉಚಿತ ಹಾಸ್ಟೆಲ್ ಸೌಲಭ್ಯವಿದೆ ಎಂದು ಚಿತ್ರದುರ್ಗ ಬಾಲಕರ ಸರ್ಕಾರಿ ಪದವಿಪೂರ್ವ ಕಾಲೇಜು ಪ್ರಾಚಾರ್ಯರು ತಿಳಿಸಿದ್ದಾರೆ.

## ಪ್ರಮುಖ ಸುದ್ದಿ

**ಹೊಸದುರ್ಗದಲ್ಲಿ ಕೃಷಿ ಪರಿಕರ ಮಾರಾಟಗಾರರಿಗೆ ಶಾಸಕರ ಸೂಚನೆ**

# ರೈತರಿಗೆ ಸಕಾಲಕ್ಕೆ ಕೃಷಿ ಪರಿಕರಗಳನ್ನ ನೀಡಿ: ಬಿ.ಜಿ.ಗೋವಿಂದಪ್ಪ

» **ಹೊಸದುರ್ಗ**

ಮುಂಗಾರಿನಲ್ಲಿ ಸಕಾಲಕ್ಕೆ ಮಳೆಯಾಗಿರುವುದರಿಂದ ಹೆಸರು, ಅಲಸಂದೆ, ಸಾವೆ, ಹತ್ತಿ ಬಿತ್ತನೆಯಾಗುತ್ತಿದ್ದು, ಈ ವರ್ಷ ಬಹಳ ಮುಂಗಾರು ಹಂಗಾಮು ಬಹಳ ಆಶಾದಾಯಕವಾಗಿದೆ. ಗ್ರಾಮೀಣ ಮಟ್ಟದಲ್ಲಿಯೇ ರೈತರಿಗೆ ಸ್ಥಳೀಯವಾಗಿ ಕೃಷಿ ಪರಿಕರಗಳು ಸಕಾಲಕ್ಕೆ ದೊರೆಯುವಂತೆ ನೋಡಿಕೊಳ್ಳಿ ಎಂದು ಕೃಷಿ ಪರಿಕರಗಳ ಮಾರಾಟಗಾರರಿಗೆ ಶಾಸಕ ಬಿ.ಜಿ.ಗೋವಿಂದಪ್ಪ ಸೂಚನೆ ನೀಡಿದರು.

ಪಟ್ಟಣದ ತಾ.ಪಂ.ಸಭಾಂಗಣದಲ್ಲಿ ಆಯೋಜಿಸಿದ್ದ 2025 26 ನೇ ಸಾಲಿನ ಕೃಷಿ ಪರಿಕರ ಮಾರಾಟಗಾರರಿಗೆ ಜಾಗೃತಿ ಸಭೆ ಹಾಗೂ ಸುರಕ್ಷಿತ ಕೀಟನಾಶಕಗಳ ಬಳಕೆ ಕಾರ್ಯಗಾರದ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು.

ಕೃಷಿ ಪರಿಕರ ಮಾರಾಟಗಾರರು ನಿಯಮಗಳ ಪ್ರಕಾರ ಕಡ್ಡಾಯವಾಗಿ ತರಬೇತಿ ಪಡೆದು, ಪರವನಾಗಿ ಪಡೆದುಕೊಂಡು ಕೃಷಿ ಪರಿಕರಗಳನ್ನ ರೈತರಿಗೆ ವ್ಯವಸ್ಥಿತವಾಗಿ ಒದಗಿಸುವ ಕೆಲಸ ಮಾಡಬೇಕು. ರೈತರೊಂದಿಗೆ ಸಂಪರ್ಕ ಇಟ್ಟುಕೊಂಡು, ರಸಗೊಬ್ಬರ ಕೊರತೆಯಾಗದಂತೆ ದಾಸ್ತಾನು ಮಾಡಬೇಕು. ಕಳಪೆ ರಸಗೊಬ್ಬರ ಮಾರಾಟ, ಅಕ್ರಮ ದಾಸ್ತಾನು ಮಾಡಿ ರಸಗೊಬ್ಬರದ ಕೊರತೆ ಉಂಟಾದರೆ, ಅಂತವರ ಮೇಲೆ ಕಾನೂನು ಕ್ರಮ ತೆಗೆದುಕೊಳ್ಳಲಾಗುವುದು ಎಂದು ಎಚ್ಚರಿಸಿದರು.



ನರೇಗಾ ಯೋಜನೆಯಡಿ ಗೋಧಾಮು ನಿರ್ಮಾಣ ಮಾಡಿಕೊಂಡು ಗೊಬ್ಬರ ದಾಸ್ತಾನು ಮಾಡಿಕೊಳ್ಳಬೇಕು. ಹೊಸ ತಳಿಗಳ ಬಳಕೆ ಮಾಡಿ ಹೆಚ್ಚು ಉತ್ಪಾದನೆ ಮಾಡಬೇಕು. ಬೆಳೆಗಳಿಗೆ ಹೆಚ್ಚಿಗೆ ಗೊಬ್ಬರವನ್ನು ಹಾಕದೆ, ಮಣ್ಣು ಪರೀಕ್ಷೆ ಆಧಾರದ ಮೇಲೆ ಪೋಷಕಾಂಶಗಳ ನಿರ್ವಹಣೆಯ ಬಗ್ಗೆ ತಿಳಿದುಕೊಂಡು, ನಂತರ ಬೇಕಾದ ಪ್ರಮಾಣದಲ್ಲಿ ಗೊಬ್ಬರ ಬಳಸಿ ಸಾವಯವ ಕೃಷಿಗೆ ಒತ್ತು ನೀಡಲು ಸಹಕರಿಸಿ ಎಂದು ಹೇಳಿದರು.

ಸಹಾಯಕ ಕೃಷಿ ನಿರ್ದೇಶಕ (ಜಾಗೃತದಳ) ಸಂಕಾಳ ಮಲ್ಲನಗೌಡ ಮಾತನಾಡಿ, ಕೃಷಿಪರಿಕರಮಾರಾಟಗಾರರು ರಸಗೊಬ್ಬರ, ಮಾರಾಟದರ ಮತ್ತು ಲೈಸೆನ್ಸ್ ಪ್ರದರ್ಶಿಸುವುದು ಕಡ್ಡಾಯವಾಗಿದೆ. ರೈತರೊಂದಿಗೆ ಸಂಯಮದಿಂದ ವರ್ತಿಸಬೇಕು. ಪೊಟ್ಯಾಶ್ ಬಳಕೆ ಮಾಡುತ್ತಿಲ್ಲ, ಇದರಿಂದ ರೈತರಿಗೆ ಆಗುವ ಪ್ರಯೋಜನಗಳ ಬಗ್ಗೆ ತಿಳುವಳಿಕೆ ಹೇಳಿ ಮಾರಾಟ ಮಾಡಬೇಕು. ಪರವಾನಗಿ ಇರುವಂತಹ ಪರಿಕರಗಳನ್ನು ಮಾತ್ರ ಮಾರಾಟ ಮಾಡಿ, ಎಂಆರ್‌ಪಿ ಗಿಂತ ಹೆಚ್ಚಿನ ದರದಲ್ಲಿ ಮಾರಾಟ ಮಾಡುವಂತಿಲ್ಲ. ಎಂ ನಮೋನೆಯಲ್ಲಿ ಬಿಲ್ ಕೊಡಬೇಕು ಮತ್ತು ರೈತರ ಸಹಿ ಕಡ್ಡಾಯವಾಗಿರಬೇಕು ಎಂದು ಸೂಚಿಸಿದರು.

ಟಿ.ಎ.ಪಿ.ಸಿ.ಎಂ.ಸಿ ಅಧ್ಯಕ್ಷ ಕಾರೇಹಳ್ಳಿ ಬಸವರಾಜ್ ಮಾತನಾಡಿ, ರೈತ ದೇಶದ ಬೆನ್ನೆಲುಬು. ರೈತರಿಗೆ ಯಾವುದೇ ರೀತಿ ಮೋಸವಾಗದಂತೆ ಅವರ ಸೇವೆ ಮಾಡಬೇಕು. ಗೊಬ್ಬರ ದಾಸ್ತಾನು ಮಾಡಿ ಸಕಾಲಕ್ಕೆ ಪೂರೈಕೆ ಮಾಡಬೇಕು. ರೈತರಿಗೆ ಯಾವುದೇ ತೊಂದರೆಯಾಗದಂತೆ ಕೃಷಿ ಪರಿಕರಗಳನ್ನು ಮಾರಾಟ ಮಾಡಿ ಎಂದು ತಿಳಿಸಿದರು.

ಕೃಷಿ ಪರಿಕರ ಮಾರಾಟಗಾರರ ಸಂಘದ ಅಧ್ಯಕ್ಷ ತ್ಯಾಗರಾಜ ಮಾತನಾಡಿ, ಸಹಾಯಕ ಕೃಷಿ ನಿರ್ದೇಶಕರ ಸಲಹೆಯಂತೆ ಯೂರಿಯಾ ದಾಸ್ತಾನು ಮಾಡಿ, ರೈತರಿಗೆ ಸಮಯಕ್ಕೆ ಸರಿಯಾಗಿ ವಿತರಿಸುವುದರಿಂದ ಸಮಸ್ಯೆ ಕಡಿಮೆಯಾಗುತ್ತಿದೆ. ಡಿ.ಎ.ಪಿ ರಸಗೊಬ್ಬರಕ್ಕೆ ಬದಲಾಗಿ ಕಾಂಪ್ಲೆಕ್ಸ್ ಗೊಬ್ಬರಗಳನ್ನು ರೈತರಿಗೆ ಮನವರಿಕೆ ಮಾಡಿ ವಿತರಿಸಲಾಗುತ್ತಿದೆ ಎಂದು ತಿಳಿಸಿದರು.

ಈ ವೇಳೆ ಕೃಷಿಕ ಸಮಾಜದ ಅಧ್ಯಕ್ಷ ರಾಜ ಶಿವಮೂರ್ತಿ, ಹಿರಿಯ ತೋಟಗಾರಿಕೆ ನಿರ್ದೇಶಕ ವೆಂಕಟೇಶ್, ತಾ.ಪಂ.ಕಾರ್ಯನಿರ್ವಹಣಾಧಿಕಾರಿ ಸುನಿಲ್, ಸಹಕಾರ ಅಭಿವೃದ್ಧಿ ಅಧಿಕಾರಿ ರಾಮು ಮತ್ತು ಸಹಾಯಕ ಕೃಷಿ ನಿರ್ದೇಶಕ ಈಶ ಸೇರಿದಂತೆ ಕೃಷಿ ಅಧಿಕಾರಿಗಳು, ಆತ್ಮ ಸಿಬ್ಬಂದಿಗಳು, ಕೃಷಿ ಸಂಜೀವಿನಿ ಸಿಬ್ಬಂದಿಗಳು ಭಾಗವಹಿಸಿದ್ದರು.

> ಕೃಷಿ ಪರಿಕರ ಮಾರಾಟಗಾರರು ಜ್ಞಾನ ಮತ್ತು ವಿಜ್ಞಾನದ ಮಾಹಿತಿ ಪಡೆದು ಅವುಗಳನ್ನು ಪಾಲನೆ ಮಾಡುವುದರ ಬಗ್ಗೆ ಅಧಿನಿಯಮಗಳನ್ನು ತಿಳಿದುಕೊಳ್ಳಬೇಕು. ಏಪ್ರಿಲ್ - ಮೇ ತಿಂಗಳಲ್ಲಿ ವಾಡಿಕೆಗಿಂತ ಹೆಚ್ಚಾಗಿ ಮಳೆಯಾಗಿರುವುದರಿಂದ ಭೂಮಿಯ ಸಿದ್ಧತೆಗೆ ಅನುಕೂಲವಾಗಿದೆ. ವ್ಯವಸಾಯ ಪದ್ಧತಿಗಳನ್ನು ಅಳವಡಿಸಿರುವುದರಿಂದ ಲಾಭ ಹೆಚ್ಚಾಗುತ್ತದೆ. ಹೊಸದುರ್ಗ ತಾಲೂಕಿನಲ್ಲಿ ಮುಂಗಾರಿನಲ್ಲಿಯೇ 2 ಬೆಳೆ ಬೆಳೆಯುತ್ತಾರೆ. ಹಾಗಾಗಿ ಗೊಬ್ಬರದ ಅವಶ್ಯಕತೆ ಹೆಚ್ಚಾಗಿದ್ದು, ಕೃಷಿ ಪರಿಕರ ಮಾರಾಟಗಾರರ ಪಾತ್ರ ಹೆಚ್ಚಾಗಿರುತ್ತದೆ. ಮಾರಾಟವನ್ನು ಲಾಭಕ್ಕಾಗಿ ಮಾಡಬಾರದು. ರೈತರ ಸೇವೆಗಾಗಿ ಕೆಲಸ ಮಾಡಬೇಕು, ಜಾಗತಿಕ ಮಟ್ಟದಲ್ಲಿ ಆದ ಬದಲಾವಣೆಯಿಂದ ಗೊಬ್ಬರದ ದರ ಏರು-ಪೇರು ಆಗುತ್ತದೆ.
>
> » **ಮಂಜುನಾಥ್ ಜಂಟಿ ನಿರ್ದೇಶಕರು, ಕೃಷಿ ಇಲಾಖೆ, ಚಿತ್ರದುರ್ಗ**

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T